ನಮ್ಮ ಜನ
NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 263 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 09–05–2024 ಗುರುವಾರ | ಪುಟ: 4 | ಬೆಲೆ : ರೂ.2–00
Volume - 01 Issue - 263 | Title- Code: KARKAN 28269 | Chitradurga | Date: 09-05-2024 Thursday | Page: 4 | Price: Rs. 2-00

ಒಳಪುಟದ ಸುದ್ದಿಗಳು
ಮೈಲನಹಳ್ಳಿ ಗ್ರಾಪಂ: 1 ಮತ ಅಂತರದಿಂದ ಅಧ್ಯಕ್ಷಸ್ಥಾನ ಪಡೆದ ಜೆ.ಜಗನ್ನಾಥ 2
ಹೊಸದುರ್ಗ: ಭವ್ಯವಾಗಿ ಜರುಗಿದ ಶ್ರೀ ದುರ್ಗಾಂಬಿಕಾ ದೇವಿ ರಥೋತ್ಸವ 3
ಕೋಟಿ ಕುಬೇರರು, ಖಾಲಿ ಕೈ ಕುಚೇಲರು 4

ಸುದ್ದಿ, ಜಾಹಿರಾತಿಗೆ 9686622252

**ಶುಭ ನುಡಿ**
ಬಟ್ಟೆ ನೋಡಿ ಗೆಳೆತನ ಮಾಡಬೇಡ, ಗುಣ ನೋಡಿ ಗೆಳೆತನ ಮಾಡು , ಯಾಕೆಂದರೆ ಬಟ್ಟೆ ಹರಿದು ಹೋಗುವ ತನಕ ಮಾತ್ರ ಇರುತ್ತದೆ, ಗುಣ ಸಾಯುವವರೆಗೂ ಇರುತ್ತದೆ !!
» ಶುಭೋದಯ

# ಮೇ 10 ರಿಂದ ವಿವಿ ಸಾಗರ ಅಚ್ಚುಕಟ್ಟು ಪ್ರದೇಶಕ್ಕೆ 2ನೇ ಹಂತದ ನೀರು ಬಿಡುಗಡೆ

» ಚಿತ್ರದುರ್ಗ

ಬರಗಾಲದ ಹಿನ್ನಲೆಯಲ್ಲಿ ತೋಟಗಾರಿಕೆ ಹಾಗೂ ಇತರೆ ಕೃಷಿ ಬೆಳೆಗಳಿಗೆ ನೀರಿನ ಅವಶ್ಯಕತೆ ಇದೆ. ಈ ನಿಟ್ಟಿನಲ್ಲಿ ಜಿಲ್ಲಾಡಳಿತ ಹಾಗೂ ವಿವಿ ಸಾಗರ ಜಲಾಶಯದ ನೀರಾವರಿ ಸಲಹಾ ಸಮಿತಿ ಸಭೆಯ ತೀರ್ಮಾನದಂತೆ ಇದೇ ಮೇ 10 ರಿಂದ 25 ದಿನಗಳ ಕಾಲ ವಾಣಿ ವಿಲಾಸ ಸಾಗರ ಅಚ್ಚುಕಟ್ಟು ಪ್ರದೇಶಕ್ಕೆ ಬೇಸಿಗೆ ಹಂಗಾಮಿಗೆ ಎರಡನೇ ಹಂತದ ನೀರು ಹರಿಸಲು ತೀರ್ಮಾನ ಕೈಗೊಳ್ಳಲಾಯಿತು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬುಧವಾರ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಅಧ್ಯಕ್ಷತೆಯಲ್ಲಿ ವಿ.ವಿ.ಸಾಗರ ಜಲಾಶಯದ ನೀರಾವರಿ ಸಲಹಾ ಸಮಿತಿ ಸಭೆ ನಡೆಯಿತು.

ವಾಣಿವಿಲಾಸ ಸಾಗರ ಜಲಾಶಯದ ಅಚ್ಚುಕಟ್ಟು ಪ್ರದೇಶಕ್ಕೆ 2023–24ನೇ ಸಾಲಿನಲ್ಲಿ ಅತೀ ಕಡಿಮೆ ಮಳೆಯಾಗಿರುವುದರಿಂದ, ರೈತರ ಜಮೀನುಗಳಿಗೆ ನೀರು ಹರಿಸುವುದು ಅವಶ್ಯವಿರುತ್ತದೆ. ಈ ಹಿನ್ನಲೆಯಲ್ಲಿ ವಾಣಿವಿಲಾಸ ಸಾಗರ ಜಲಾಶಯ ಅಚ್ಚುಕಟ್ಟು ಪ್ರದೇಶಕ್ಕೆ ಬೇಸಿಗೆ ಹಂಗಾಮಿಗೆ ಎರಡನೇ ಹಂತದ ನೀರು ಬಿಡುಗಡೆ ಮಾಡಲು ಸಭೆಯಲ್ಲಿ ತೀರ್ಮಾನ ಕೈಗೊಳ್ಳಲಾಯಿತು.

ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಮಾತನಾಡಿ, ಬರಗಾಲ ಹಾಗೂ ಬೇಸಿಗೆಯ ಈ ಸಂದರ್ಭದಲ್ಲಿ ವಿವಿ ಸಾಗರ ಅಚ್ಚುಕಟ್ಟು ಪ್ರದೇಶದ ರೈತರು ಮುತುವರ್ಜಿವಹಿಸಿ ನೀರು ಸದ್ಭಳಕೆ ಮಾಡಿಕೊಳ್ಳಬೇಕು. ಅನಾವಶ್ಯಕವಾಗಿ



ನೀರು ವ್ಯರ್ಥ ಮಾಡಬಾರದು. ಎಲ್ಲಿ ಅಗತ್ಯ ಹಾಗೂ ಅನಿವಾರ್ಯ ಇರುವ ಕಡೆ ಮಾತ್ರ ನೀರು ಬಳಕೆ ಮಾಡಿಕೊಳ್ಳಬೇಕು. ಯಾವುದೇ ಕಾರಣಕ್ಕೂ ಬೀಳು ಭೂಮಿಗೆ ಅನಾವಶ್ಯಕವಾಗಿ ನೀರು ಹರಿಸಬಾರದು. ಅನಾವಶ್ಯಕವಾಗಿ ನೀರು ವ್ಯರ್ಥ ಮಾಡುವುದು ಕಂಡು ಬಂದರೆ ನೀರು ಸ್ಥಗಿತಗೊಳಿಸಲಾಗುವುದು ಎಂದು ತಿಳಿಸಿದ ಅವರು, ಟ್ಯಾಂಕರ್ ಮೂಲಕ ವಾಣಿಜ್ಯ ಉದ್ದೇಶಕ್ಕಾಗಿ ನೀರು ಮಾರಾಟ ಮಾಡಬಾರದು. ಒಂದು ವೇಳೆ ವಾಣಿಜ್ಯ ಬಳಕೆಗಾಗಿ ನೀರು ಬಳಕೆ ಮಾಡುವುದು ಕಂಡು ಬಂದರೆ ಸಂಬಂಧಪಟ್ಟವರ ವಿರುದ್ಧ ಎಫ್ಐಆರ್ ದಾಖಲು ಮಾಡಲಾಗುವುದು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಕಟ್ಟುನಿಟ್ಟಿನ ಸೂಚನೆ ನೀಡಿದರು.

ನೀರು ಹರಿಸುವ ಮುನ್ನ ಅಚ್ಚುಕಟ್ಟು ಪ್ರದೇಶದಲ್ಲಿನ ಬೋರ್‌ವೆಲ್‌ಗಳಲ್ಲಿ ನೀರಿನ ಮಟ್ಟ ಹಾಗೂ ನೀರು ಹರಿಸಿದ ನಂತರದ ನೀರಿನ ಮಟ್ಟದ ಕುರಿತು ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯಿಂದ ಸಮೀಕ್ಷೆ ಕೈಗೊಳ್ಳುವಂತೆ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಹೇಳಿದರು.

**ವಿವಿ ಸಾಗರ ನೀರಿನ ಪ್ರಮಾಣದ ವಿವರ:** ವಿವಿ ಸಾಗರ ಜಲಾಶಯದ ಒಟ್ಟು ನೀರಿನ ಸಂಗ್ರಹಣಾ ಸಾಮರ್ಥ್ಯವು 30.422 ಟಿಎಂಸಿಗಳಾಗಿದ್ದು, ಜಲಾಶಯದ ವ್ಯಾಪ್ತಿಯಲ್ಲಿ ಒಟ್ಟು 12135.00 ಹೆಕ್ಟೇರ್ ಅಚ್ಚುಕಟ್ಟು ಪ್ರದೇಶವಿದ್ದು, ಇದರಲ್ಲಿ ಪ್ರಮುಖವಾಗಿ ತೋಟಗಾರಿಕೆ ಬೆಳೆಗಳಾದ ತೆಂಗು, ಅಡಿಕೆ, ಬಾಳೆ 5557.00 ಹೆಕ್ಟೇರ್ ಆಗಿರುತ್ತದೆ. ಉಳಿದಂತೆ 6578.00 ಹೆಕ್ಟೇರ್ ಖುಷ್ಕಿ ಜಮೀನು ಇರುತ್ತದೆ.

ಮೇ 08ರಂದು ವಿವಿ ಸಾಗರ ಜಲಾಶಯದಲ್ಲಿ 112 ಅಡಿಗಳಷ್ಟು ನೀರಿನ ಸಂಗ್ರಹವಿದ್ದು, ಈ ಮಟ್ಟಕ್ಕೆ ನೀರಿನ ಸಂಗ್ರಹಣೆಯು 16.96 ಟಿಎಂಸಿಗಳಾಗಿದ್ದು, ಇದರಲ್ಲಿ 1.87 ಟಿಎಂಸಿ ಬಳಕೆಗೆ ಬಾರದ ಪ್ರಮಾಣವಾಗಿರುತ್ತದೆ ಹಾಗೂ ಬಳಕೆಗೆ ಬರುವ ನೀರಿನ ಪ್ರಮಾಣ 15.09 ಟಿಎಂಸಿ ಇರುತ್ತದೆ. ಹಿರಿಯೂರು ಪಟ್ಟಣದ ಕುಡಿಯುವ ನೀರಿಗಾಗಿ, ಚಿತ್ರದುರ್ಗ ಪಟ್ಟಣದ ಕುಡಿಯುವ ನೀರಿಗಾಗಿ ಮತ್ತು ಚಳ್ಳಕೆರೆ ಪಟ್ಟಣ, ಸಂಶೋಧನಾ ಕೇಂದ್ರಗಳು ಹಾಗೂ 18 ಹಳ್ಳಿಗಳ ಕುಡಿಯುವ ನೀರಿಗಾಗಿ ಒಟ್ಟು 0.2115 ಟಿಎಂಸಿ ಅವಶ್ಯಕವಾಗಿರುತ್ತದೆ.

ಹಾಲಿ ಅಚ್ಚುಕಟ್ಟು ಪ್ರದೇಶದ ವ್ಯಾಪ್ತಿಯಲ್ಲಿ ಜಲಾಶಯದಿಂದ ಮಳೆಗಾಲದ ಬೆಳೆ ಹಾಗೂ ತೋಟಗಾರಿಕೆ ಹದ ನೀರನ್ನು 30 ದಿನ ಹರಿಸಿದರೆ ಸರಾಸರಿ ನೀರಿನ ಪ್ರಮಾಣ ಸುಮಾರು 1.40 ಟಿಎಂಸಿ ಬೇಕಾಗಲಿದೆ. ಆವಿಯಾಗುವ ನೀರಿನ ಪ್ರಮಾಣ ಸುಮಾರು 0.516 ಟಿಎಂಸಿ, ಒಟ್ಟು ಬಳಕೆಯಾಗುವ ನೀರಿನ ಪ್ರಮಾಣ 2.127 ಟಿಎಂಸಿ, ಜಲಾಶಯದಲ್ಲಿ ಉಳಿಯಬಹುದಾದ ನೀರಿನ ಪ್ರಮಾಣ 14.83 ಟಿಎಂಸಿ (111.55 ಅಡಿಗಳು) ಇರಲಿದೆ. ಮೇಲ್ಮಟ್ಟದ ಕಾಲುವೆ ಅಚ್ಚುಕಟ್ಟು ಪ್ರದೇಶದ 03 ಗ್ರಾಮಗಳು, ಬಲನಾಲ ಅಚ್ಚುಕಟ್ಟು ಪ್ರದೇಶದ 21 ಗ್ರಾಮಗಳು ಹಾಗೂ ಎಡನಾಲ ಅಚ್ಚುಕಟ್ಟು ಪ್ರದೇಶದ 18 ಗ್ರಾಮಗಳು ಹಾಗೂ ನಾಲೆಗಳಲ್ಲಿ ನೀರನ್ನು ಬಿಟ್ಟಾಗ ಹಿರಿಯೂರು ತಾಲ್ಲೂಕಿನ 38 ಗ್ರಾಮಗಳ ಅಂತರ್ಜಲ ಅಭಿವೃದ್ಧಿಯಾಗಿ ಸಾರ್ವಜನಿಕರಿಗೆ ಜಾನುವಾರುಗಳಿಗೆ ಕುಡಿಯುವ ನೀರಿನ ಸಮಸ್ಯೆಯನ್ನೂ ಸಹ ಸುಧಾರಿಸಬಹುದಾಗಿದೆ.

ಸಭೆಯಲ್ಲಿ ವಿಶ್ವೇಶ್ವರಯ್ಯ ಜಲನಿಗಮದ ವಿವಿ ಸಾಗರ ಉಪವಿಭಾಗ ಹಿರಿಯೂರು ಕಾರ್ಯಪಾಲಕ ಇಂಜಿನಿಯರ್ ಬಾರಿಕರ್ ಚಂದ್ರಪ್ಪ, ಸಹಾಯ ಕಾರ್ಯಪಾಲಕ ಇಂಜಿನಿಯರ್ ವಿಜಯಕುಮಾರ್, ಕೃಷಿ ಇಲಾಖೆ ಸಹಾಯಕ ಕೃಷಿ ನಿರ್ದೇಶಕ ಎಂ.ವಿ.ಮಂಜುನಾಥ್, ಶಿರಸ್ತೆದಾರ ಸಣ್ಣಪ್ಪ, ವಿವಿ ಸಾಗರ ಜಲಾಶಯದ ನೀರಾವರಿ ಸಲಹಾ ಸಮಿತಿ ಸದಸ್ಯರಾದ ಸುಂದರೇಶ್, ಅಸಿಲ್ ಆಲಿ, ಅನಿಲ್ ಕುಮಾರ್, ನಾಗರಾಜ್ ಸೇರಿದಂತೆ ಮತ್ತಿತರರು ಇದ್ದರು.

## ಫಾಸ್ಟ್ ನ್ಯೂಸ್

### ಬೆಳೆಹಾನಿ ಪರಿಹಾರ ಪಾವತಿ: ಸಹಾಯವಾಣಿ ಆರಂಭ

» ಚಿತ್ರದುರ್ಗ

ಬೆಳೆ ಪರಿಹಾರ ಪಾವತಿ ಸಂಬಂಧ ಮಾಹಿತಿ ಪಡೆದುಕೊಳ್ಳಲು ರೈತರಿಗೆ ಅನುಕೂಲವಾಗುವಂತೆ ಜಿಲ್ಲಾಧಿಕಾರಿ ಕಚೇರಿ, ಉಪವಿಭಾಗಾಧಿಕಾರಿಗಳ ಕಚೇರಿ ಹಾಗೂ ಜಿಲ್ಲೆಯ 6 ತಾಲ್ಲೂಕು ಕಚೇರಿಗಳಲ್ಲಿ ಸಹಾಯವಾಣಿ ಆರಂಭಿಸಲಾಗಿದೆ ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ತಿಳಿಸಿದ್ದಾರೆ. 2023ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ಬರ ಪರಿಸ್ಥಿತಿಯಿಂದ ಉಂಟಾದ ಬೆಳೆ ಹಾನಿಗೆ ಸಂಬಂಧಿಸಿದಂತೆ ಜಿಲ್ಲೆಯ 1,31,776 ರೈತರಿಗೆ ಮೊದಲನೇ ಕಂತಾಗಿ ಗರಿಷ್ಠ ರೂ.2000 ರವರೆಗೆ ಒಟ್ಟು ರೂ.25,61,56,790/–ಗಳನ್ನು ಪರಿಹಾರವನ್ನು ಈಗಾಗಲೇ ವಿತರಿಸಲಾಗಿದೆ. ಪ್ರಸ್ತುತ ಎಸ್.ಡಿ.ಆರ್.ಎಫ್, ಎನ್.ಡಿ.ಆರ್.ಎಫ್ ಮಾರ್ಗಸೂಚಿ ಪ್ರಕಾರ ಅರ್ಹತೆಯ ಅನುಸಾರ ಅರ್ಹ ರೈತರಿಗೆ ಗರಿಷ್ಠ ರೂ.2000 ರವರೆಗೆ ಪರಿಹಾರ ಮೊತ್ತ ಪಾವತಿಸಿರುವುದನ್ನು ಪರಿಗಣನೆಗೆ ತೆಗೆದುಕೊಂಡು ಅರ್ಹತೆಯಂತೆ ಇನ್ನುಳಿದ ಬಾಕಿ ಬೆಳೆಹಾನಿ ಪರಿಹಾರ (ಇನ್‌ಪುಟ್ ಸಬ್ಸಿಡಿ) ಮೊತ್ತವನ್ನು ವಿತರಿಸಲಾಗುವುದು. ಅದರಂತೆ ಜಿಲ್ಲೆಯ 1,17,064 ರೈತರಿಗೆ ಒಟ್ಟು ರೂ.89,31,60,013/– ಗಳನ್ನು ಡಿಬಿಟಿ ಮುಖಾಂತರ ಪಾವತಿಸಲಾಗುತ್ತಿದೆ. ಪರಿಹಾರ ಹಣ ಪಾವತಿಗೆ ಸಂಬಂಧಿಸಿದಂತೆ ಜಿಲ್ಲಾಧಿಕಾರಿಗಳ ಕಚೇರಿ ಸಹಾಯವಾಣಿ ಸಂಖ್ಯೆ 08194–222538, ಉಪ ವಿಭಾಗಾಧಿಕಾರಿಗಳ ಕಚೇರಿ 08194–222413 ಹಾಗೂ ಚಿತ್ರದುರ್ಗ ತಾಲ್ಲೂಕು ಕಚೇರಿ 08194–222416, ಚಳ್ಳಕೆರೆ 08195–250648, ಹಿರಿಯೂರು 08193–263226 ಹೊಸದುರ್ಗ 08199–295058, ಹೊಳಲ್ಕೆರೆ 08191–200013, ಮೊಳಕಾಲ್ಮೂರು ತಾಲ್ಲೂಕು ಕಚೇರಿ 08198–229234 ಗೆ ಕರೆ ಮಾಡಿ ತಮ್ಮ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಬಹುದು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ತಿಳಿಸಿದ್ದಾರೆ.

### ಬಬ್ಬೂರಿನಲ್ಲಿ 27.4 ಮಿ.ಮೀ ಮಳೆ

» ಚಿತ್ರದುರ್ಗ

ಮೇ.08ರ ಮಳೆಯ ವಿವರದನ್ವಯ ಜಿಲ್ಲೆಯ ಹಿರಿಯೂರು ತಾಲ್ಲೂಕಿನ ಬಬ್ಬೂರಿನಲ್ಲಿ 27.4 ಮಿ.ಮೀ ಮಳೆಯಾಗಿದ್ದು, ಇದು ಜಿಲ್ಲೆಯಲ್ಲಿ ಸುರಿದ ಅತ್ಯಧಿಕ ಪ್ರಮಾಣದ ಮಳೆಯಾಗಿದೆ. ಹಿರಿಯೂರು ತಾಲ್ಲೂಕು ಹಿರಿಯೂರಿನಲ್ಲಿ 22.6ಮಿ.ಮೀ, ಇಕ್ಕನೂರು 10 ಮಿ.ಮೀ, ಈಶ್ವರಗೆರೆ 4.2ಮಿ.ಮೀ ಮಳೆಯಾಗಿದೆ. ಚಳ್ಳಕೆರೆ ತಾಲ್ಲೂಕಿನ ಪರಶುರಾಂಪುರ ಹಾಗೂ ಡಿ.ಮರಿಕುಂಟೆಯಲ್ಲಿ 27.2ಮಿ.ಮೀ ಹಾಗೂ ಚಳ್ಳಕೆರೆ ನಗರದಲ್ಲಿ 1 ಮಿ.ಮೀ ಮಳೆಯಾಗಿದೆ. ಹೊಸದುರ್ಗ ತಾಲ್ಲೂಕಿನ ಮತ್ತೋಡಿನಲ್ಲಿ 2.1 ಮಿ.ಮೀ ಮಳೆಯಾಗಿದೆ ಎಂದು ಜಿಲ್ಲಾಧಿಕಾರಿಗಳ ಕಚೇರಿ ಪ್ರಕಟಣೆ ತಿಳಿಸಿದೆ.

### ಬಸವೇಶ್ವರ ಹಾಗೂ ಹೇಮರೆಡ್ಡಿ ಮಲ್ಲಮ್ಮ ಜಯಂತಿ

» ಚಿತ್ರದುರ್ಗ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರಸಭೆ ವತಿಯಿಂದ ಇದೇ ಮೇ.10ರಂದು ಬೆಳಿಗ್ಗೆ 11 ಗಂಟೆಗೆ ಚಿತ್ರದುರ್ಗ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸಾಂಸ್ಕೃತಿಕ ನಾಯಕ ವಿಶ್ವಗುರು ಜಗಜ್ಯೋತಿ ಬಸವೇಶ್ವರ ಜಯಂತಿ ಹಾಗೂ ಶಿವಶರಣೆ ಹೇಮರಡ್ಡಿ ಮಲ್ಲಮ್ಮ ಜಯಂತಿ ಆಯೋಜಿಸಲಾಗಿದೆ. ಲೋಕಸಭಾ ಚುನಾವಣಾ ನೀತಿ ಸಂಹಿತೆ ಜಾರಿ ಇರುವ ಹಿನ್ನೆಲೆಯಲ್ಲಿ ಬಸವೇಶ್ವರರ ಹಾಗೂ ಹೇಮರಡ್ಡಿ ಮಲ್ಲಮ್ಮರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವ ಮೂಲಕ ಸರಳವಾಗಿ ಆಚರಿಸಲಾಗುವುದು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ರವಿಚಂದ್ರ ತಿಳಿಸಿದ್ದಾರೆ.

## ಬೆಳೆ ವಿಮೆ ಪರಿಹಾರಕ್ಕಾಗಿ ರೈತರಿಂದ ಎಡಿಸಿಗೆ ಮನವಿ

» ಚಿತ್ರದುರ್ಗ

ತಾಲ್ಲೂಕು, ತುರುವನೂರು ಗ್ರಾಮ ಪಂಚಾಯತಿಯ ವ್ಯಾಪ್ತಿಯಲ್ಲಿ ಬೆಳೆ ವಿಮೆಯ ಕಟ್ಟಿದ ರೈತರಿಗೆ ವಿಮಾ ಕಂಪನಿಯವರು. ಹಣವನ್ನು ನಿಗದಿಪಡಿಸಿದ್ದಾರೆ ಆದರೆ ರೈತರ ಖಾತೆಗೆ ನಯಾ ಪೈಸೆ ಹಾಕದೆ ಇರುವ ಕಾರಣ ಅಪರ ಜಿಲ್ಲಾಧಿಕಾರಿರವರಿಗೆ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಡಾ. ವಾಸುದೇವ ಮೇಟಿಬಣದಿಂದ ಮನವಿಯನ್ನು ಸಲ್ಲಿಸಲಾಯಿತು.



2023.24ನೇ ಸಾಲಿನ ಮುಂಗಾರು ಬೆಳೆಯಾದ ಮೆಕ್ಕೆಜೋಳಕ್ಕೆ ಈ ಭಾಗದ ರೈತರು ಬೆಳೆ ವಿಮೆಯನ್ನು ಪಾವತಿಸಿದ್ದರು, ಸಕಾಲಕ್ಕೆ ಮಳೆ ಬಾರದೆ ಬೆಳೆ ಹಾಳಾಯಿತು, ಈ ಹಿನ್ನಲೆಯಲ್ಲಿ ವಿಮಾ ಕಂಪನಿಯವರು ಬೆಳೆ ವಿಮೆಯ ಹಣವನ್ನು ನಿಗಧಿ ಮಾಡಿದ್ದಾರೆ ಆದರೆ ನಮ್ಮ ಖಾತೆಗಳಿಗೆ ಹಣವನ್ನು ಹಾಕಿಲ್ಲ ಬಡವರಾದ ನಮಗೆ ವಿಮಾ ಕಂಪನಿಯಿಂದ ಬೆಳೆ ವಿಮೆಯ ಹಣವನ್ನು ಕೂಡಿಸುವಂತೆ ಅಪರ ಜಿಲ್ಲಾಧಿಕಾರಿಗಳಿಗೆ ಮನವಿಯನ್ನು ಮಾಡಲಾಯಿತು.

ನಮ್ಮ ಮನವಿಯನ್ನು ಸ್ವೀಕಾರ ಮಾಡಿದ ಅಪರ ಜಿಲ್ಲಾಧಿಕಾರಿಯವರಾದ ಕುಮಾರಸ್ವಾಮಿಯವರು ಶೀಘ್ರದಲ್ಲಿಯೇ ಹಣವನ್ನು ಪಾವತಿಸಲು ಸಂಬಂಧಪಟ್ಟ ಇಲಾಖೆಗೆ ದೂರವಾಣಿ ಮುಖಾಂತರ ಸಂಪರ್ಕಿಸಿ ಶೀಘ್ರವೇ ರೈತರ ಖಾತೆಗೆ ಹಣವನ್ನು ನೀಡಲು ಸೂಚಿಸಿದರು.

ಈಸಂದರ್ಭದಲ್ಲಿಮಂಜುನಾಥ್, ತಿಪ್ಪಾರೆಡ್ಡಿ,ನಾಗರಾಜ್,ಪೂಜಾರಪ್ಪ, ದೀಕ್ಷಿತ, ಶ್ರೀನಿವಾಸ್, ಜಯ್ಯಣ್ಣ, ವಾಸುದೇವರೆಡ್ಡಿ ಹಾಜರಿದ್ದರು

## ರಕ್ತದ ಮಡವಿನಲ್ಲಿದ್ದ ಯುವಕರ ಪ್ರಾಣ ಉಳಿಸಿದ ರಾಂಪುರ ಪಿಎಸ್ಐ



» ನಮ್ಮಜನ ಸಮಾಚಾರ

ಮೊಳಕಾಲ್ಮುರು: ಅಪಘಾತವಾಗಿ ರಕ್ತ ಮಡುವಿನಲ್ಲಿ ಬಿದ್ದು ಜೀವನ್ಮರಣ ಹೋರಾಟ ನಡೆಸುತ್ತಿದ್ದ ಯುವಕರನ್ನು ಆಸ್ಪತ್ರೆಗೆ ಸೇರಿಸುವ ಮೂಲಕ ರಾಂಪುರ ಪೊಲೀಸ್ ಠಾಣೆಯ ಪಿಎಸ್ ಐ ಮಹೇಶ್ ಹೊಸಪೇಟೆ ಮಾನವೀಯತೆ ಮೆರೆದಿದ್ದಾರೆ. ರಾಷ್ಟ್ರೀಯ ಹೆದ್ದಾರಿಯ ಮೊಳಕಾಲ್ಮುರು ತಾಲೂಕಿನ ಹಾನಗಲ್ ಗ್ರಾಮದ ರೈಸ್ ಮಿಲ್ ಬಳಿಯಲ್ಲಿ ಮಂಗಳವಾರ ಸಂಜೆ ಬೈಕ್ ಅಪಘಾತವಾಗಿ,ಇಬ್ಬರು ಯುವಕರು ರಕ್ತ ಮಡುವಿನಲ್ಲಿ ಬಿದ್ದು ಜೀವನ್ಮರಣ ಹೋರಾಟ ನಡೆಸುತ್ತಿದ್ದರು.

ಪುಟ 2

**ಪ್ರಮುಖ ಸುದ್ದಿ**

# ನಗರದಲ್ಲಿ ಡಿಸಿಎಂ ಡಿಕೆಶಿ ವಿರುದ್ಧ ಜೆಡಿಎಸ್ ಪ್ರತಿಭಟನೆ

» ಚಿತ್ರದುರ್ಗ

ಅಶ್ಲೀಲ ವೀಡಿಯೋ ಮೂಲಕ ಹೆಣ್ಣು ಮಕ್ಕಳ ಮಾನ ಹರಾಜು ಹಾಕುತ್ತಿರುವ ರಾಜ್ಯದ ಉಪ ಮುಖ್ಯಮಂತ್ರಿ ಹಾಗೂ ಕಾಂಗ್ರೆಸ್ ಸರ್ಕಾರದ ವಿರುದ್ಧ ಜಿಲ್ಲಾ ಜಾತ್ಯಾತೀತ ಜನತಾದಳದಿಂದ ಒನಕೆ ಓಬವ್ವ ವೃತ್ತದಲ್ಲಿ ಮಾನವ ಸರಪಳಿ ನಿರ್ಮಿಸಿ ನಂತರ ಜಿಲ್ಲಾಧಿಕಾರಿ ಕಚೇರಿ ಎದುರು ಬುಧವಾರ ಪ್ರತಿಭಟನೆ ನಡೆಸಿ ಅಪರ ಜಿಲ್ಲಾಧಿಕಾರಿ ಮೂಲಕ ರಾಜ್ಯಪಾಲರಿಗೆ ಮನವಿ ಸಲ್ಲಿಸಲಾಯಿತು.

ಪ್ರತಿಭಟನೆಯ ನೇತೃತ್ವ ವಹಿಸಿದ್ದ ಜೆಡಿಎಸ್. ಜಿಲ್ಲಾಧ್ಯಕ್ಷ ಎಂ.ಜಯಣ್ಣ ಮಾತನಾಡಿ ಪೆನ್‌ಡ್ರೈವ್ ಹಗರಣಕ್ಕೆ ಸಂಬಂಧಿಸಿದಂತೆ ಪ್ರಜ್ವಲ್ ರೇವಣ್ಣನಿಗೆ ಶಿಕ್ಷೆ ನೀಡಲು ಕಾನೂನಿದೆ. ಅದನ್ನು ಬಿಟ್ಟು ಸಂತ್ರಸ್ಥ ಮಹಿಳೆಯರ ಮಾನ ಹರಾಜು ಹಾಕುತ್ತಿರುವ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್‌ನನ್ನು




ಸಚಿವ ಸಂಪುಟದಿಂದ ಕೈಬಿಟ್ಟು ತಕ್ಕ ಶಿಕ್ಷೆ ವಿಧಿಸಬೇಕು. ನಾಲ್ಕು ಗೋಡೆಗಳ ನಡುವೆ ನಡೆದಿರುವ ಕೃತ್ಯವನ್ನು ಇಡಿ ದೇಶವೇ ನೋಡುವಂತೆ ಮಾಡಿರುವುದು ಅತ್ಯಂತ ನೀಚ ಕೃತ್ಯ. ಹಾಗಾಗಿ ಡಿ.ಕೆ.ಶಿವಕುಮಾರ್ ವಿರುದ್ದ ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಿದರು.

ಜೆಡಿಎಸ್. ಮಾಜಿ ಜಿಲ್ಲಾಧ್ಯಕ್ಷ ಡಿ.ಯಶೋಧರ ಮಾತನಾಡಿ ಕೋರ್ ಕಮಿಟಿ ಈಗಾಗಲೆ ಪ್ರಜ್ವಲ್ ರೇವಣ್ಣನನ್ನು ಪಕ್ಷದಿಂದ ಉಚ್ಚಾಟಿಸಿದೆ. ಹೆಣ್ಣು ಮಕ್ಕಳ ಮಾನ ಸಂರಕ್ಷಣೆ ಮಾಡಬೇಕಾಗಿರುವ ಕಾಂಗ್ರೆಸ್ ಸರ್ಕಾರವೇ ಬೀದಿ ಪಾಲು ಮಾಡಿದೆ. ಈ ನೆಲದ ಕಾನೂನನ್ನು ಜೆಡಿಎಸ್. ಗೌರವಿಸುತ್ತದೆ. ಕಾಂಗ್ರೆಸ್ ಕೃಪಾ ಪೋಷಿತ ನಾಟಕ ಮಂಡಳಿ ಸಿಡಿ ಬಿಡುಗಡೆಗೊಳಿಸಿರುವ ಕಳಂಕ ರಾಜ್ಯದ ಮುಖ್ಯಮಂತ್ರಿಹಾಗೂಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಇವರುಗಳಿಗೆ ಮೆತ್ತಿಕೊಂಡಿದೆ. ರಾಜಕೀಯ ಲಾಭಕ್ಕಾಗಿ ಮತ್ತೊಬ್ಬರ ಮಾನ ಹರಣವಾಗಬಾರದು. ಮತ ಪಡೆಯುವ ಭ್ರಮೆಯಲ್ಲಿ ಕಾಂಗ್ರೆಸ್ ತೇಲುತ್ತಿರುವುದು ಮೂರ್ಖತನ ಎಂದು ಲೇವಡಿ ಮಾಡಿದರು.

ಪ್ರಜ್ವಲ್ ರೇವಣ್ಣ ಪ್ರಕರಣವನ್ನು ಎಸ್.ಐ.ಟಿ. ಪಾರದರ್ಶವಾಗಿ ತನಿಖೆ ನಡೆಸುತ್ತಿಲ್ಲದಿರುವುದರಿಂದ ಸಿ.ಬಿ.ಐ.ಗೆ ವಹಿಸಬೇಕು. ರಾಜ್ಯದಲ್ಲಿ ಜನ ವಿರೋಧಿ ಸರ್ಕಾರವಿರುವುದು ನಮ್ಮ ದುರಂತ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಪುಟ 2

## ಫಾಸ್ಟ್ ನ್ಯೂಸ್

### ನಾಳೆ ಬಸವ ಮಂಟಪದಲ್ಲಿ ಬಸವ ಜಯಂತಿ

» ಚಿತ್ರದುರ್ಗ

ನಗರದ ರಂಗಯ್ಯನ ಬಾಗಿಲ ಬಳಿಯ ಬಸವಮಂಟಪದಲ್ಲಿ ಸಾಂಸ್ಕೃತಿಕ ನಾಯಕ ವಿಶ್ವ ಗುರು ಬಸವಣ್ಣರವರ 891ನೇ ಜಯಂತಿಯ ಅಂಗವಾಗಿ ಮೇ10 ರಂದು ವಿವಿಧ ರೀತಿಯ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಬೆಳಿಗ್ಗೆ 9 ಗಂಟೆಗೆ ಮರವಣಿಗೆ, ಗುರುಬಸವಪೂಜೆ, ಧ್ವಜಾರೋಹಣ, ತೊಟ್ಟಿಲು ಕಾರ್ಯಕ್ರಮ ನಡೆಯಲಿದೆ. ನಂತರ 11 ಗಂಟೆಗೆ ವಚನ ಚಿಂತನೆ ಕಾರ್ಯಕ್ರಮದ ಸಾನಿಧ್ಯವನ್ನು ಉಳವಿಯ ಅಕ್ಕ ನಾಗಲಾಂಭಿಕ ಯೋಗ ಪೀಠದ ಪೀಠಾಧ್ಯಕ್ಷರಾದ ಶ್ರೀ ಜಗದ್ಗುರು ಮಾತೆ ದಾನೇಶ್ವರಿ ಮಾತಾಜಿ ವಹಿಸಲಿದ್ದಾರೆ. ಸಮ್ಮುಖವನ್ನು ಸಾಸಲಹಟ್ಟಿಯ ಅಕ್ಕಮಹಾದೇವಿ ಮಠದ ಶ್ರೀ ಬಸವೇಶ್ವರಿ ಮಾತಾಜಿ ವಹಿಸಲಿದ್ದಾರೆ. ಕಾರ್ಯಕ್ರಮವನ್ನು ಶಿರಸಿಯ ಅರಣ್ಯ ಮಹಾ ವಿದ್ಯಾಲಯದ ಡಾ.ಹೆಚ್.ಶಿವಣ್ಣ ದೀನ್ ಉದ್ಘಾಟಿಸಲಿದ್ದಾರೆ. ಧ್ವಜಾರೋಹಣವನ್ನು ವೈದ್ಯಾಧಿಕಾರಿಗಳಾದ ಡಾ.ಇಂದುಧರ್ ನೆರವೇರಿಸಲಿದ್ದಾರೆ. ರಾಷ್ಟ್ರೀಯ ಬಸವ ದಳದ ಅಧ್ಯಕ್ಷರಾದ ಜೆ.ಸಿ.ಮನೋಹರ್, ಡಾ.ಸತೀಶ್ ಕುಮಾರ್, ನಿತ್ಯವಾಣಿ ಪತ್ರಿಕೆಯ ಸಂಪಾದಕರಾದ ಎಸ್.ಟಿ.ನವೀನ್ ಕುಮಾರ್, ನಿವೃತ್ತ ಶಿಕ್ಷಕರಾದ ಈರಪ್ಪ, ಸವಿತಾ ಸಮಾಜದ ಚಿತ್ರದುರ್ಗ ತಾಲ್ಲೂಕು ಅಧ್ಯಕ್ಷರಾದ ಆರ್.ಶ್ರೀನಿವಾಸ್, ರಾಜಣ್ಣ, ಭಾಗವಹಿಸಲಿದ್ದಾರೆ. ಕಾರ್ಯಕ್ರಮದ ನಂತರ ಬಸವ ಮಂಟಪದ ಮಕ್ಕಳಿಂದ ವಚನ ನೃತ್ಯ ಕಾರ್ಯಕ್ರಮ ನಡೆಯಲಿದೆ.

### ಬಸವ ಜಯಂತಿ ಹಾಗೂ ಹೇಮರೆಡ್ಡಿ ಮಲ್ಲಮ್ಮ ಜಯಂತಿ

» ದಾವಣಗೆರೆ

ಜಿಲ್ಲಾಡಳಿತ ವತಿಯಿಂದ ಮೇ.10 ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾಡಳಿತ ಭವನದಲ್ಲಿ ಬಸವ ಜಯಂತಿ ಹಾಗೂ ಹೇಮರೆಡ್ಡಿ ಮಲ್ಲಮ್ಮ ಜಯಂತಿಯನ್ನು ನೀತಿಸಂಹಿತೆ ಹಿನ್ನಲೆಯಲ್ಲಿ ಸರಳ ಹಾಗೂ ಸಾಂಕೇತಿಕವಾಗಿ ಆಚರಿಸಲಾಗುವುದು ಎಂದು ಕನ್ನಡ ಮತ್ತು ಸಂಸ್ಕೃತಿಕ ಇಲಾಖೆಯ ಸಹಾಯಕ ನಿರ್ದೇಶಕರಾದ ಮಂಗಳನಾಯ್ಕ್ ತಿಳಿಸಿದ್ದಾರೆ.

### ಶ್ರೀಶಂಕರಾಚಾರ್ಯ ಜಯಂತಿ ಮೇ.12 ರಂದು

» ದಾವಣಗೆರೆ

ಜಿಲ್ಲಾಡಳಿತ ವತಿಯಿಂದ ಮೇ.12 ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾಡಳಿತ ಭವನದಲ್ಲಿ ಶ್ರೀಶಂಕರಾಚಾರ್ಯ ಜಯಂತಿಯನ್ನು ನೀತಿಸಂಹಿತೆ ಹಿನ್ನಲೆಯಲ್ಲಿ ಸರಳ ಹಾಗೂ ಸಾಂಕೇತಿಕವಾಗಿ ಆಚರಿಸಲಾಗುವುದು ಎಂದು ಕನ್ನಡ ಮತ್ತು ಸಂಸ್ಕೃತಿಕ ಇಲಾಖೆಯ ಸಹಾಯಕ ನಿರ್ದೇಶಕರಾದ ಮಂಗಳನಾಯ್ಕ್ ತಿಳಿಸಿದ್ದಾರೆ.

### ಲೋಕಾಯುಕ್ತ ಪೊಲೀಸ್ ಅಧಿಕಾರಿಗಳಿಂದ ಅಹವಾಲು ಸ್ವೀಕಾರ

» ದಾವಣಗೆರೆ

ದಾವಣಗೆರೆ ವಿಭಾಗದ ಲೋಕಾಯುಕ್ತ ಪೊಲೀಸ್ ಅಧಿಕಾರಿಗಳು ಮೇ.9 ರಂದು ಹೊನ್ನಾಳಿ ತಾಲ್ಲೂಕು ಪ್ರವಾಸ ಕೈಗೊಳ್ಳಲಿದ್ದು ಸಾರ್ವಜನಿಕರು ತಮ್ಮ ದೂರುಗಳನ್ನು ಸಲ್ಲಿಸಬಹುದು. ಲೋಕಾಯುಕ್ತ ಪೊಲೀಸ್ ಅಧೀಕ್ಷಕರಾದ ಎಂ.ಎಸ್ ಕೌಲಾಪೂರೆ ಅವರು ಮೇ.9 ರಂದು ಹೊನ್ನಾಳಿ ಪಟ್ಟಣದ ಪ್ರವಾಸಿ ಮಂದಿರದಲ್ಲಿ, ಬೆಳಿಗ್ಗೆ 11.30 ರಿಂದ ಮಧ್ಯಾಹ್ನ 1.30ರವರೆಗೆ ಸಾರ್ವಜನಿಕರಿಂದ ಅಹವಾಲು ಸ್ವೀಕರಿಸುವರು. ಸಾರ್ವಜನಿಕರು ಸರ್ಕಾರದ ವಿವಿಧ ಇಲಾಖೆಗಳಿಗೆ ಸಲ್ಲಿಸಿದ ಅರ್ಜಿಗಳನ್ನು ಇತ್ಯರ್ಥ ಮಾಡದ ಬಗ್ಗೆ ತಮ್ಮ ದೂರು ಹಾಗೂ ಅಹವಾಲುಗಳನ್ನು ಸಲ್ಲಿಸಬಹುದು. ನ್ಯಾಯಾಲಯದಲ್ಲಿ ವಿಚಾರಣೆ ಬಾಕಿ ಇದ್ದರೆ, ಅಂತಹ ದೂರುಗಳನ್ನು ಸ್ವೀಕರಿಸಲಾಗುವುದಿಲ್ಲ.

### ಡಿಸಿಎಂ ಡಿಕೆಶಿ ವಿರುದ್ಧ ಜೆಡಿಎಸ್ ಪ್ರತಿಭಟನೆ

» ಮೊದಲ ಪುಟದಿಂದ

ಜೆಡಿಎಸ್. ರಾಜ್ಯ ಪ್ರಧಾನ ಕಾರ್ಯದರ್ಶಿ ಬಿ.ಕಾಂತರಾಜ್ ಪ್ರತಿಭಟನೆಯನ್ನುದ್ದೇಶಿಸಿ ಮಾತನಾಡಿ ರಾಜ್ಯದ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಬಳಿ ಇನ್ನು ಯಾರ್‍ಯಾರ ಸಿಡಿಗಳಿದೆಯೋ ಗೊತ್ತಿಲ್ಲ. ರಾಜಕೀಯ ಬೇಳೆ ಬೇಯಿಸಿಕೊಳ್ಳಲು ಸಿಡಿ ಬಿಡುಗಡೆಗೊಳಿಸಿ ಹೆಣ್ಣು ಮಕ್ಕಳ ಮಾನ ಬೀದಿಗೆಳೆದಿರುವುದು ಕೀಳುತನ ತೋರಿಸುತ್ತದೆ. ಪ್ರಜ್ವಲ್ ರೇವಣ್ಣನನ್ನು ನಾವುಗಳ್ಯಾರು ಸಮರ್ಥಿಸಿಕೊಳ್ಳುವುದಿಲ್ಲ. ತಪ್ಪು ಮಾಡಿದವರು ನೀರು ಕುಡಿಯಲೇಬೇಕು ಎಂದು ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ಹೇಳಿದ್ದಾರೆ. ಹಾಗಾಗಿ ಡಿ.ಕೆ.ಶಿವಕುಮಾರ್‌ನನ್ನು ಸಚಿವ ಸಂಪುಟದಿಂದ ಕೈಬಿಡಬೇಕು. ತನಿಖೆಯನ್ನು ಎಸ್.ಐ.ಟಿ.ಗೆ ವಹಿಸಿರುವುದರಿಂದ ಸಂತ್ರಸ್ಥರಿಗೆ ನ್ಯಾಯ ಸಿಗುವುದು ಅನುಮಾನ. ಅದಕ್ಕಾಗಿ ಸಿ.ಬಿ.ಐ.ಗೆ ವಹಿಸುವಂತೆ ಆಗ್ರಹಿಸಿದರು.ಜೆಡಿಎಸ್. ಜಿಲ್ಲಾ ಕಾರ್ಯಾಧ್ಯಕ್ಷ ಜೆ.ಬಿ.ಶೇಖರ್, ರಾಜ್ಯ ಕಾರ್ಯದರ್ಶಿ ಮಠದಟ್ಟಿ ವೀರಣ್ಣ, ಜಿಲ್ಲಾ ಮಹಾ ಪ್ರಧಾನ ಕಾರ್ಯದರ್ಶಿ ಡಿ.ಗೋಪಾಲಸ್ವಾಮಿ ನಾಯಕ, ತಾಲ್ಲೂಕು ಅಧ್ಯಕ್ಷ ಸಣ್ಣತಿಮ್ಮಣ್ಣ, ಗುರುಸಿದ್ದಪ್ಪ, ರವೀಂದ್ರಪ್ಪ, ಶಂಕರ್‌ಮೂರ್ತಿ, ಮಂಜುನಾಥ್, ಪಾಲ್ಗೊಂಡಿದ್ದರು.

# ಎಲ್ಲ ಶಿಕ್ಷಕರಿಗೂ ನಗದು ರಹಿತ ಆರೋಗ್ಯ ವಿಮೆ

» ಚಿತ್ರದುರ್ಗ

ಪಿಂಚಣಿ, ವೇತನ, ಸೇವಾ ಭದ್ರತೆ ಸೇರಿದಂತೆ ಶಿಕ್ಷಕರ ಸಮಸ್ಯೆಗಳ ಪರಿಹಾರಕ್ಕೆ ವಿಧಾನ ಪರಿಷತ್‌ನಲ್ಲಿ ಧ್ವನಿ ಎತ್ತುವವರು ಇಲ್ಲವಾಗಿದ್ದಾರೆ. ನಿಮ್ಮಗಳ ಧ್ವನಿಯಾಗಿ ಕೆಲಸ ಮಾಡಲು ಒಂದು ಅವಕಾಶ ಮಾಡಿಕೊಡಿ ಎಂದು ಆಗ್ನೇಯ ಶಿಕ್ಷಕರ ಕ್ಷೇತ್ರದ ಸ್ವತಂತ್ರ ಅಭ್ಯರ್ಥಿ ಲೋಕೇಶ್ ತಾಳಿಕಟ್ಟೆ (ಲೋಕೇಶ್ವರಪ್ಪ) ಮನವಿ ಮಾಡಿದರು.



ನಗರದಲ್ಲಿ ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅನುದಾನರಹಿತ ಶಾಲಾ, ಕಾಲೇಜು ಶಿಕ್ಷಕರ ಸೇವಾಭದ್ರತೆ ಹಾಗೂ ಸಮಾನ ವೇತನ ಕೊಡಿಸಲಾಗುತ್ತದೆ. 1995 ರ ನಂತರದ ಕನ್ನಡ ಮತ್ತು ಇತರೆ ಭಾಷೆಗಳ ಎಲ್ಲಾ ಶಾಲೆಗಳನ್ನು ಅನುದಾನಕ್ಕೆ ಒಳಪಡಿಸಲು ಹೋರಾಟ ಮಾಡಲಾಗುತ್ತದೆ ಎಂದರು.

ಸಾಮಾಜಿಕ, ಆರ್ಥಿಕ, ಮತ್ತು ಸಾಂಸ್ಕೃತಿಕ ಅಭಿವೃದ್ಧಿ ಮತ್ತು ಎಲ್ಲಾ ವರ್ಗದ ಜನರನ್ನು ಒಳಗೊಳ್ಳುವ ಸುಸ್ಥಿರ ಕರ್ನಾಟಕವನ್ನು ಕಟ್ಟಿಕೊಡುವ ಜವಾಬ್ದಾರಿಯನ್ನು ನಿರ್ವಹಿಸಬೇಕಿದೆ. ಸಾರ್ವಜನಿಕ ಆರೋಗ್ಯ ವ್ಯವಸ್ಥೆಯನ್ನು ಗಟ್ಟಿಗೊಳಿಸಲು ಮತ್ತು ಹೆಚ್ಚು ಹೆಚ್ಚು ಉದ್ಯೋಗಗಳನ್ನುಸೃಷ್ಟಿಸುವ ನಿಟ್ಟಿನಲ್ಲಿ ವಿಧಾನ ಪರಿಷತ್ತಿನ ಒಳಗೆ ಮತ್ತು ಹೊರಗೆ ನಿರಂತರ ಹೋರಾಟ ನಡೆಸುವ ಕ್ರಿಯಾಶೀಲ ವ್ಯಕ್ತಿಗಳಾಗಿರಬೇಕಿದೆ ಎಂದು ತಿಳಿಸಿದರು.

ಶಿಕ್ಷಕರ ಹಿತ ಕಾಯುವ ಜೊತೆಜೊತೆಗೆ ಜನರಿಗೆ ಆಸರೆಯಾಗಿರುವ ಸಾರ್ವಜನಿಕ ಶಿಕ್ಷಣದ ಹಿತ ಕಾಯುವುದೂ ಗುರುತ್ತರ ಜವಾಬ್ದಾರಿ. ಆದರೆ ಕಳೆದ ಎರಡು ಮೂರು ದಶಕಗಳಿಂದ ಪದವೀಧರರು ಮತ್ತು ಶಿಕ್ಷಕರ ಮೂಲಕ ಆಯ್ಕೆ ಯಾಗುವ ಸದಸ್ಯರು ತಮ್ಮನ್ನು ಆರಿಸಿ ಕಳಿಸಿದ ಕ್ಷೇತ್ರದ ಜನರ ಹಿತ ಕಾಪಾಡುವ ಮೂಲಕ ಆರೋಗ್ಯಕರ ಸಮಾಜ ನಿರ್ಮಾಣಕ್ಕೆ ಶ್ರಮಿಸುವ ಮೂಲಕ ಕೆಲಸ ಮಾಡುವ ಬದಲು ಸ್ವಾರ್ಥ, ಸ್ವಜನ ಪಕ್ಷಪಾತ, ಅಧಿಕಾರ ವ್ಯಾಮೋಹ, ಮತ್ತು ಹಣಕ್ಕಾಗಿ ಕೆಲಸ ನಿರ್ವಹಿಸುವ ಮೂಲಕ ತಮ್ಮ ಸ್ಥಾನಗಳಿಗೆ ಚ್ಯುತಿ ತಂದಿದ್ದಾರೆ. ನಮ್ಮ ಶಿಕ್ಷಣ ಸಂಸ್ಥೆಗಳಿಗೆ, ಶಿಕ್ಷಕರಿಗೆ ಅವರದೇ ಆದ ಧ್ವನಿ ಇಲ್ಲ ದಂತಾಗಿದೆ. ಕಾರಣ ಸರ್ಕಾರಗಳು, ಅಧಿಕಾರಿಗಳು ತಮ್ಮ ಮನ ಬಂದಂತೆ ಅವೈಜ್ಞಾನಿಕ ಕಾಯಿದೆಗಳನ್ನು ರೂಪಿಸುತ್ತಲೇ ಇದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಕಳೆದ ಎರಡು ದಶಕದ ನನ್ನ ಅನುಭವದಲ್ಲಿ ಈ ವ್ಯವಸ್ಥೆಯಲ್ಲಿಯ ಲೋಪ ದೋಷಗಳನ್ನು ಸರಿಪಡಿಸಲು ಶಿಕ್ಷಣ ಸಂಸ್ಥೆಗಳನ್ನು, ಶಿಕ್ಷಕರನ್ನು ಒಗ್ಗೂಡಿಸಿ, ಪಕ್ಷಾತೀತವಾಗಿ, ಬಲವಾದ ಹೋರಾಟಗಳನ್ನು ಜನಪರ ನೆಲೆಯಲ್ಲಿ ನಡೆಸಿ ಕೊಂಡು ಬಂದಿದ್ದೇನೆ. ಈ ಹೋರಾಟವನ್ನು ಮುಂದುವರಿಸುತ್ತಲೇ ಸರ್ಕಾರದ ಗಮನ ಸೆಳೆದು ಜನಪರವಾದ ತೀರ್ಮಾನಗಳನ್ನು ಕೈಗೊಳ್ಳಲು ಮತ್ತು ಸರ್ಕಾರವನ್ನು ಒತ್ತಾಯಿಸಲು ವಿಧಾನ ಪರಿಷತ್ತು ಚುನಾವಣೆ ಒಂದು ಉತ್ತಮ ವೇದಿಕೆಯಾಗಲಿದೆ ಎಂದರು.

ಈ ಎಲ್ಲಾ ಅಂಶಗಳ ಹಿನ್ನೆಲೆಯಲ್ಲಿ ವಿಧಾನ ಪರಿಷತ್ತಿಗೆ ಆತ್ಮೀಯ ಶಿಕ್ಷಕರ ಕ್ಷೇತ್ರದ ಸ್ವತಂತ್ರ ಅಭ್ಯರ್ಥಿಯಾಗಿ ನಿಮ್ಮೆಲ್ಲರ ಆಶಯದ ಮೇರೆಗೆ ಸ್ಪರ್ಧಿಸುತ್ತಿದ್ದೇನೆ. ನನ್ನ ಗೆಲುವೇ ನಿಮ್ಮ ಗೆಲುವು. ವಿಧಾನ ಪರಿಷತ್‌ನಲ್ಲಿ ನಾನು ನಿಮ್ಮ ಧ್ವನಿಯಾಗಲಿದ್ದೇನೆ. ಕೋಲಾರ, ಚಿಕ್ಕಬಳ್ಳಾಪುರ, ತುಮಕೂರು, ಮಧುಗಿರಿ, ಚಿತ್ರದುರ್ಗ ಮತ್ತು ದಾವಣಗೆರೆ ಜಿಲ್ಲೆಗಳಲ್ಲಿ ಈ ಚುನಾವಣೆಯಲ್ಲಿ ಸುಶಿಕ್ಷಿತರಾದ ನಾವು ಈ ಬಗ್ಗೆ ಗಂಭೀರವಾಗಿ ಯೋಚಿಸಿ ತೀರ್ಮಾನಿಸಿ ಮತ ಚಲಾಯಿಸಬೇಕಿದೆ ಎಂದು ತಿಳಿಸಿದರು.

ಅನುದಾನ ರಹಿತ ಶಾಲಾ ಶಿಕ್ಷಕರಿಗೆ ಕೋವಿಡ್ ಪ್ಯಾಕೇಜ್ ಕೊಡಿಸಲಾಗಿದೆ. ಶಿಕ್ಷಕರ ಕಲ್ಯಾಣ ನಿಧಿ ಸಂಸ್ಥೆಯಲ್ಲಿ ಎಲ್ಲಾ ಶಿಕ್ಷಕರಿಗೂ ನಗದು ರಹಿತ ಆರೋಗ್ಯ ವಿಮಾ ಸೌಲಭ್ಯ ಕೊಡಿಸುವ ಆದೇಶ ಮಾಡಿಸಲಾಗಿದೆ. ಸರ್ಕಾರಿ ಶಾಲೆಗಳಿಗೆ 15000 ಶಿಕ್ಷಕರನ್ನು ಭರ್ತಿ ಮಾಡಲು ಒತ್ತಾಯಿಸಿ ಯಶಸ್ವಿಯಾಗಿದ್ದೇನೆ. ಹತ್ತು ವರ್ಷಕ್ಕೊಮ್ಮೆ ಆರ್ ಆರ್ (ಮಾನ್ಯತೆನವೀಕರಣ) ನೀಡಲು ರಾಜ್ಯ ಹೈಕೋರ್ಟ್ ನಿಂದ ಆದೇಶ ಕೊಡಿಸಲಾಗಿದೆ. 8ನೇ ತರಗತಿಯವರೆಗೆ ಯಾವುದೇ ಬೋರ್ಡ್ ಪರೀಕ್ಷೆ ನಡೆಸುವಂತಿಲ್ಲ ಎಂದು ಸುಪ್ರೀಂ ಕೋರ್ಟ್ ನಿಂದ ತೀರ್ಪು ಪಡೆಯಲಾಗಿದೆ. ಹೈಸ್ಕೂಲ್‌ಗೆ ಅನುಮತಿ, ಹಾಗೂ ಅನ್ಯಪತ್ಯಕ್ರಮಕ್ಕೆ ಅನುಮತಿ ನೀಡುವ ಅಧಿಕಾರವನ್ನು ಡಿಡಿಪಿಐಗೆ ನೀಡಿಸಿದ್ದು. ಇವು ಸಾಂಕೇತಿಕ ಮಾತ್ರ. ಇನ್ನು ಮುಂತಾದ ಅನೇಕ ಸಮಸ್ಯೆಗಳನ್ನು ತಮ್ಮ ಸಹಕಾರದಿಂದ ಬಗೆಹರಿಸಲಾಗಿದೆ ಎಂದು ಹೇಳಿದರು.

ಅನುದಾನಿತ ಹಾಗೂ ಅನುದಾನ ರಹಿತ ಶಾಲೆಗಳಲ್ಲಿರುವ ಎಲ್ಲ ಶಿಕ್ಷಕರಿಗೂ ನಗದು ರಹಿತ ಆರೋಗ್ಯ ವಿಮೆ ಕೊಡಿಸುವುದು. ಖಾಸಗಿ ಅನುದಾನಿತ ಮತ್ತು ಅನುದಾನ ರಹಿತ ಶಾಲೆ ಕಾಲೇಜ್ ಗಳಿಗೆ ಮಾನ್ಯತೆ ನವೀಕರಣವನ್ನು ಭ್ರಷ್ಟಾಚಾರ ಮುಕ್ತ ವಾಗಿಸಿ ಶಾಶ್ವತ ಮಾನ್ಯತೆ ನವೀಕರಣ ಪಡೆಯುವಂತಾಗಿಸುವುದು. ಶಾಲಾ ಕಾಲೇಜುಗಳಲ್ಲಿ ಖಾಲಿ ಇರುವ ಎಲ್ಲಾ ಶಿಕ್ಷಕರ ಹುದ್ದೆಗಳನ್ನು ಭರ್ತಿ ಮಾಡಿಸುವುದು. ಎಲ್ಲಾ ವರ್ಗದ ಅತಿಥಿ ಶಿಕ್ಷಕರನ್ನು ಕಾಯಂ ಗೊಳಿಸುವುದು ಮೊದಲ ಕರ್ತವ್ಯವಾಗಿದೆ ಎಂದರು.

ಐಟಿಐ, ಡಿಪ್ಲೋಮೋ, ಹಾಗೂ ಬಿಎಡ್ ಮುಂತಾದ ಕಾಲೇಜುಗಳಲ್ಲಿ ಯ ಶಿಕ್ಷಕರ ಸಮಸ್ಯೆಗಳನ್ನು ಹೋಗಲಾಡಿಸುವುದು. ಅನುದಾನಿತ ಶಾಲೆಗಳಲ್ಲಿ ಯ 2015ರ ನಂತರದ ಖಾಲಿ ಇರುವ ಎಲ್ಲಹುದ್ದೆಗಳನ್ನು ಭರ್ತಿ ಮಾಡಿಸುವುದು. ಅನುದಾನಿತ ಶಾಲಾ ಕಾಲೇಜುಗಳ ತರಗತಿಗಳ ವಿದ್ಯಾರ್ಥಿಗಳ ಮಿತಿಯನ್ನು ಕನಿಷ್ಠ 10ಕ್ಕೆ ಇಳಿಸುವುದು 14, ಅನುದಾನಿತ ಸಂಸ್ಥೆಗಳ ಶಿಕ್ಷಕರುಗಳಿಗೆ ವಿಳಂಬ ಎಲ್ಲ ಕಾಲಕಾಲಕ್ಕೆ ಸಂಬಳ ಕೊಡಿಸುವುದು ಸೇರಿಕೊಂಡಂತೆ ಒಟ್ಟಾರೆ ಶಿಕ್ಷಕರಿಗೆ, ಶಿಕ್ಷಣ ಸಂಸ್ಥೆಗಳಿಗೆ, ಸರ್ಕಾರದಿಂದ, ಮತ್ತು ಅಧಿಕಾರಿಗಳಿಂದ ಕಿರುಕುಳ ಆಗದಂತೆ ನೋಡಿಕೊಳ್ಳುವುದು ನನ್ನ ಮೂಲ ಗುರಿಗಳು. ಇವುಗಳ ಕುರಿತು ಪ್ರಾಮಾಣಿಕವಾಗಿ ಹೋರಾಡುತ್ತೇನೆ ಎಂದು ಮತದಾರರಿಗೆ ಭರವಸೆ ನೀಡಿದರು. ಅನುದಾನ ರಹಿತ ಶಾಲೆಗಳ ಒಕ್ಕೂಟದ ಚಳ್ಳಕೆರೆ ತಾಲ್ಲೂಕು ಅಧ್ಯಕ್ಷ ಯಾದಲಗಟ್ಟ ಜಗನ್ನಾಥ್, ರುಪ್ಪ ಉಪಾಧ್ಯಕ್ಷರಾದ ವೆಂಕಟೇಶ್ ಉಪಸ್ಥಿತರಿದ್ದರು.

# ವಿಶ್ವ ರೆಡ್‌ಕ್ರಾಸ್ ದಿನಾಚರಣೆ: ರಕ್ತದಾನ ಶಿಬಿರ

» ಚಿತ್ರದುರ್ಗ

ವಿಶ್ವ ರೆಡ್‌ಕ್ರಾಸ್ ದಿನಾಚರಣೆಯ ಅಂಗವಾಗಿ ಭಾರತೀಯ ರೆಡ್‌ಕ್ರಾಸ್ ಸಂಸ್ಥೆ ಚಿತ್ರದುರ್ಗ ಶಾಖೆ ಹಾಗೂ ಎಸ್.ಜಿ.ಸುರಕ್ಷಾ ನರ್ಸಿಂಗ್ ಮತ್ತು ಪ್ಯಾರಾಮೆಡಿಕಲ್ ಕಾಲೇಜು ಸಂಯುಕ್ತಾಶ್ರಯದಲ್ಲಿ ಮೇ.8 ರ ಇಂದು ಕಾಲೇಜಿನಲ್ಲಿ ಸ್ವಯಂ ಪ್ರೇರಿತ ರಕ್ತದಾನ ಶಿಬಿರವನ್ನು ಹಮ್ಮಿಕೊಳ್ಳಲಾಗಿತ್ತು.




ಶಿಬಿರವನ್ನು ಉಪ ವಿಭಾಗಾಧಿಕಾರಿಗಳಾದ ಕಾರ್ತಿಕ್ ರವರು ಉದ್ಘಾಟಿಸಿ ರೆಡ್‌ಕ್ರಾಸ್ ಸಂಸ್ಥೆ ಎನ್ನುವುದು ಸೇವಾ ಮನೋಭಾವ ಸಂಸ್ಥೆಯಾಗಿದೆ. ಇಲ್ಲಿ ಯಾವುದೇ ರೀತಿಯ ಸ್ವಾರ್ಥ ಇಲ್ಲದೆ ಸೇವೆಯನ್ನೇ ಗುರಿಯಾಗಿಸಿಕೊಂಡು ಕಳೆದ 123 ವರ್ಷಗಳಿಂದ ನಿರಂತರವಾಗಿ ಜನರ ಸೇವೆಯನ್ನು ಮಾಡುತ್ತಾ ಬಂದಿದೆ. ರೆಡ್‌ಕ್ರಾಸ್‌ನ ಸದಸ್ಯರು ಸಹಾ ಸಹಾ ಯಾವುದೇ ರೀತಿಯ ಸ್ವಾರ್ಥ ಇಲ್ಲದೆ ಸೇವೆಯನ್ನು ಮಾಡುತ್ತಿದ್ದಾರೆ. ಇವ ರಿಂದ ಅನೇಕ ಜನರಿಗೆ ಸಹಾಯ ವಾಗಿದೆ ಇವರ ಸೇವೆ ಹೀಗೇಯೇ ಮುಂದುವರೆಯಲಿ ಎಂದು ಆಶಿಸಿದರು.ಈ ಸಂದರ್ಭದಲ್ಲಿ ಭಾರ ತೀಯ ರೆಡ್‌ಕ್ರಾಸ್ ಸಂಸ್ಥೆಯ ಚಿತ್ರದುರ್ಗ ಶಾಖೆಯ ಸಭಾಪತಿ ಗಳಾದ ಶ್ರೀಮತಿ ಗಾಯತ್ರಿ ಶಿವರಾಂ, ಎಸ್.ಜಿ.ಸುರಕ್ಷಾ ನರ್ಸಿಂಗ್ ಮತ್ತು ಪ್ಯಾರಾಮೆಡಿಕಲ್ ಕಾಲೇಜಿನ ಅಧ್ಯಕ್ಷರಾದ ಡಾ.ಸಿದ್ದಲಿಂಗಯ್ಯ ಗುಡೀಮಠ್, ಕಾರ್ಯದರ್ಶಿ ಸಂತೋಷ ಗುಡೀಮಠ್, ಪ್ರಾ. ಚಂದ್ರಶೇಖರ್, ಉಪ ಸಭಾಪತಿ ಗಳಾದ ಅರುಣ್ ಉಪಸ್ಥಿತರಿದ್ದರು.

## ರಕ್ತದ ಮಡವಿನಲ್ಲಿದ್ದ ಯುವಕರ ಪ್ರಾಣ ಉಳಿಸಿದ ರಾಂಪುರ ಪಿಎಸ್‌ಐ



» ಮೊದಲ ಪುಟದಿಂದ

ಈ ಘಟನೆಯನ್ನು ನೋಡುತ್ತಾ ಕೆಲವರು ವಿಡಿಯೋ ಮಾಡುತ್ತಿದ್ದರೆ, ಇನ್ನೂ ಕೆಲವರು ಆಂಬುಲೆನ್ಸ್ ಗೆ ಫೋನ್ ಮಾಡಿ ಅಪಘಾತವಾಗಿರುವ ಮಾಹಿತಿಯನ್ನು ಹೇಳಿದರು ಸಹ ಅರ್ಧ ಗಂಟೆಗೂ ಹೆಚ್ಚು ಕಾಲ ಕಾದರೂ ಸಕಾಲದಲ್ಲಿ ಯಾವುದೇ ಆಂಬುಲೆನ್ಸ್ ಸ್ಥಳಕ್ಕೆ ಬರಲಿಲ್ಲ.

ಅದಾಗಲೇ ಅಪಘಾತದಲ್ಲಿ ಓರ್ವ ಯುವಕನು ಗಂಭೀರವಾಗಿ ಗಾಯಗೊಂಡ ಕಾರಣ ರಸ್ತೆಯಲ್ಲಿಯೇ ಯುವಕರು ನರಳುತ್ತಿದ್ದನು.

ಇನ್ನೂ ಈ ವೇಳೆ ಇದೇ ದಾರಿಯಲ್ಲಿ ಪೊಲೀಸ್ ವಾಹನದಲ್ಲಿ ತೆರಳುತ್ತಿದ್ದ ರಾಂಪುರ ಪಿಎ□□□ ಮಹೇಶ್ ಹೊಸಪೇಟೆ ಅಪಘಾತವಾಗಿರುವುದನ್ನು ಕಂಡು ಕೂಡಲೇ ಸ್ಥಳದಲ್ಲಿ ಗಾಯಾಳುಗಳನ್ನು ಉಪಚರಿಸಿ ತಕ್ಷಣವೇ ಪೊಲೀಸ್ ವಾಹನದಲ್ಲಿಯೇ ಗಾಯಳುಗಳನ್ನು



ಕರೆದೊಯ್ದು ಮೊಳಕಾಲ್ಮುರು ಪಟ್ಟಣದ ಸರ್ಕಾರಿ ಆಸ್ಪತ್ರೆಗೆ ಸೇರಿಸಿದ್ದಾರೆ.

ಅಪಘಾತದಲ್ಲಿ ಗಾಯಗೊಂಡವರ ಪೈಕಿ ತಿಪ್ಪೇಶ್ ಎಂಬುವ ಯುವಕನ್ನು ಗಂಭೀರವಾಗಿ ಗಾಯಗೊಂಡಿದ್ದು, ಹೆಚ್ಚಿನ ಚಿಕಿತ್ಸೆಗೆ ಬಳ್ಳಾರಿಯ ವಿಮ್ಸ್ ಆಸ್ಪತ್ರೆಗೆ ಕಳುಹಿಸಲಾಗಿದ್ದು, ಇನ್ನೊರ್ವ ಯುವಕನಿಗೆ ಸಾಧಾರಣ ಗಾಯಗಳಾಗಿವೆ. ಈ ಇಬ್ಬರು ಯುವಕರು ಗಡ್ಡದಬೋರಯ್ಯನಹಟ್ಟಿ ಗ್ರಾಮದವರು ಆಗಿದ್ದಾರೆ.

ಅಪಘಾತವಾದಾಗ ಸಮಯಕ್ಕೆ ಸರಿಯಾಗಿ ಚಿಕಿತ್ಸೆ ನೀಡಿದರೆ ವ್ಯಕ್ತಿ ಬದುಕುಳಿಯಬಲ್ಲ ಎಂಬುವ ಘಟನೆಗೆ ಇದು ಸಾಕ್ಷಿಯಾಗಿದ್ದು, ಪಿಎ□□□ ಮಹೇಶ ಹೊಸಪೇಟೆಯವರ ಕಾರ್ಯಕ್ಕೆ ಎಲ್ಲೆಡೆ ಪ್ರಶಂಸೆ ವ್ಯಕ್ತವಾಗುತ್ತಿದೆ. ಪೊಲೀಸರು ಎಲ್ಲಾ ಮುಗಿದ ಮೇಲೆಯೇ ಬರುವುದು ಎಂದು ಆಡಿಕೊಳ್ಳುವವರ ಮಧ್ಯೆದಲ್ಲಿ ಪಿಎಸ್ ಐ ಮಹೇಶ್ ಹೊಸಪೇಟೆ ಇದಕ್ಕೆ ಆಸ್ಪದ ನೀಡದೇ ಜೀವನ್ಮರಣ ಹೋರಾಟ ನಡೆಸುತ್ತಿದ್ದ ಯುವಕರ ಪ್ರಾಣವನ್ನು ಉಳಿಸಿ ಮಾದರಿಯಾಗಿದ್ದಾರೆ.

## ಮೈಲನಹಳ್ಳಿ ಗ್ರಾಪಂ: 1 ಮತ ಅಂತರದಿಂದ ಅಧ್ಯಕ್ಷಸ್ಥಾನ ಪಡೆದ ಜೆ.ಜಗನ್ನಾಥ

» ಚಳ್ಳಕೆರೆ

ತಾಲ್ಲೂಕಿನ ಮೊಳಕಾಲ್ಮೂರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಮೈಲನಹಳ್ಳಿ ಗ್ರಾಮ ಪಂಚಾಯಿತಿಯ ಅಧ್ಯಕ್ಷ ಸ್ಥಾನಕ್ಕೆ ಚುನಾವಣೆ ನಡೆದಿದ್ದು, ಚುನಾವಣಾಧಿಕಾರಿಯಾಗಿ ಸಿಡಿಪಿಒ ಸಿ.ಹರಿಪ್ರಸಾದ್ ಕಾರ್ಯನಿರ್ವಹಿಸಿದ್ದು, ಅಂತಿಮವಾಗಿ ಜೆ.ಜಗನ್ನಾಥ ತಮ್ಮ ಎದುರಾಳಿ ಅಭ್ಯರ್ಥಿ ನಾಗೇಂದ್ರಪ್ಪರವರಿಗಿಂತ ಒಂದು ಮತ ಹೆಚ್ಚಿಗೆ ಗಳಿಸಿ ಅಧ್ಯಕ್ಷರಾಗಿ ಆಯ್ಕೆಯಾದರು. ಪ್ರಸ್ತುತ ಗ್ರಾಮ ಪಂಚಾಯಿತಿಯಲ್ಲಿ ಒಟ್ಟು 16 ಸದಸ್ಯರಿದ್ದು, ಈ ಪೈಕಿ ಓರ್ವ ಸದಸ್ಯ ಇತ್ತೀಚೆಗೆಗಷ್ಟೇ ಮೃತಪಟ್ಟಿದ್ದ. ಈಗ ಹಾಲಿ 15



ಸದಸ್ಯರು ಪಂಚಾಯಿತಿಯಲ್ಲಿದ್ದಾರೆ. ಕಳೆದ ಅವಧಿಯಲ್ಲಿ ಅಧ್ಯಕ್ಷರಾಗಿ ಕಾರ್ಯನಿರ್ವಹಿಸಿದ ಅವಧಿ ಮುಗಿದು ರಾಜೀನಾಮೆ ನೀಡಿದ ಹಿನ್ನೆಲೆಯಲ್ಲಿ ನೂತನ ಆಯ್ಕೆ ನಡೆದಿದೆ. 15 ಸದಸ್ಯರು ಮತದಾನದಲ್ಲಿ ಪಾಲ್ಗೊಂಡು ಜಗನ್ನಾಥರವರಿಗೆ 8 ಮತ, ನಾಗೇಂದ್ರಪ್ಪನವರಿಗೆ 7 ಮತಗಳು ಲಭ್ಯವಾದವು. ಅಧ್ಯಕ್ಷ ಸ್ಥಾನ ಪಡೆದ ಜೆ.ಜಗನ್ನಾಥ ಮಾತನಾಡಿ, ನನ್ನನ್ನು ಪಂಚಾಯಿತಿ ಅಧ್ಯಕ್ಷನಾಗಿ ಆಯ್ಕೆ ಮಾಡಿದ ಎಲ್ಲಾ ಸದಸ್ಯರನ್ನು ಅಭಿನಂದಿಸುವೆ. ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಮೂಲಭೂತ ಸಮಸ್ಯೆಗಳ ನಿವಾರಣೆಗೆ ಪ್ರಾಮಾಣಿಕ ಪ್ರಯತ್ನ ನಡೆಸುವೆ ಎಂದರು. ಚುನಾವಣಾ ಪ್ರಕ್ರಿಯೆಯಲ್ಲಿ ಗ್ರಾಮ ಪಂಚಾಯಿತಿ ಉಪಾಧ್ಯಕ್ಷೆ ಮಾಂತಕ್ಕ, ಸದಸ್ಯರಾದ ಜಯಲಕ್ಷ್ಮಿ, ಶಾಂತಮ್ಮ, ಗಂಗಮ್ಮ, ಪಾಲಯ್ಯ, ಚಿದಾನಂದ, ಪಿಡಿಒ ನಾಗರಾಜು ಹಾಗೂ ಸಿಬ್ಬಂದಿ ವರ್ಗ ಉಪಸ್ಥಿತರಿದ್ದರು.

**ಪ್ರಮುಖ ಸುದ್ದಿ**

# ಜಗಜ್ಯೋತಿ ಬಸವೇಶ್ವರರ ಜಯಂತ್ಯೋತ್ಸವ ಇಂದಿನಿಂದ

» ಚಳ್ಳಕೆರೆ

ಧಾರ್ಮಿಕ ಜಗತ್ತಿನ ಮಹಾನ್ ಪುರುಷ, 12ನೇ ಶತಮಾನದಲ್ಲಿಯೇ ಧಾರ್ಮಿಕ ಶಕ್ತಿಗಳಉದಯಕ್ಕೆಕಾರಣರಾದಜಗಜ್ಯೋತಿ ಬಸವೇಶ್ವರರ ಜಯಂತಿಯನ್ನು ಸಂಭ್ರಮ, ಸಡಗರಗಳಿಂದ ಆಚರಿಸಲು ನಿರ್ಧರಿಸಿದೆ ಎಂದು ಹಿರಿಯ ಮುಖಂಡ ಪಿ.ಜಗದೀಶ್ ತಿಳಿಸಿದರು.



ಅವರು,ವೀರಶೈವಕಲ್ಯಾಣಮಂಟಪದಲ್ಲಿ ಬಸವ ಜಯಂತಿ ಕಾರ್ಯಕ್ರಮದ ಸಿದ್ದತೆಗಳ ಬಗ್ಗೆ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿ, ಜಗಜ್ಯೋತಿ ಬಸವೇಶ್ವರರ ಧಾರ್ಮಿಕ ಚಿಂತನೆಗಳು ಸಮಾಜಕ್ಕೆ ಎಂದಿಗೂ ಮಾರ್ಗದರ್ಶಕ ಈ ಹಿನ್ನೆಲೆಯಲ್ಲಿ ಅವರನ್ನು ಕರ್ನಾಟಕ ಸಾಂಸ್ಕೃತಿಕ ನಾಯಕವೆಂದು ಬಿಂಬಿಸಿದ್ದು, ನಮ್ಮ ಸಮುದಾಯ ಈ ಮಹಾನ್‌ಪುರುಷನ ಜಯಂತಿ ಆಚರಣೆಗೆ ಎಲ್ಲಾ ರೀತಿಯ ಸಿದ್ದತೆಯನ್ನು ಪೂರೈಸಿಕೊಂಡಿದ್ದು, ಅವರ ಮಾರ್ಗದರ್ಶನ ಇಡೀ ಸಮಾಜಕ್ಕೆ ಕೊಡುಗೆಯಾಗಲಿ ಎಂದು ಭಾವಿಸುವುದಾಗಿ ತಿಳಿಸಿದರು. ಮೇ.9ರ 8 ಗಂಟೆಗೆ ಬಸವೇಶ್ವರರ ಪ್ರತಿಮೆಗೆ ಮಾಲ್ಯಾರ್ಪಣೆ, ಪೂಜಾ ಕಾರ್ಯಕ್ರಮದೊಂದಿಗೆ ಆರಂಭವಾಗಲಿದ್ದು, ಬೆಳಗ್ಗೆ 10.30ಕ್ಕೆ ವೀರಶೈವ ಸಮಾಜದ ಮಹಿಳೆಯರು, ಮಕ್ಕಳ ಸಾಂಸ್ಕೃತಿಕ ಕಾರ್ಯಕ್ರಮ ಅನುಭವ ಮಂಟಪದ ವೇದಿಕೆಯಲ್ಲಿ ವೀರಶೈವ ಮಹಿಳಾ ಸಂಘದ ಅಧ್ಯಕ್ಷೆ ಪದ್ಮನಾಗರಾಜು ಅಧ್ಯಕ್ಷೆಯಲ್ಲಿ ನಡೆಯಲಿದೆ. ಉಪನ್ಯಾಸಕಿ ಸುಮತಿಜಯಪ್ಪ ಉಪನ್ಯಾಸ ನೀಡಲಿದ್ದು, ವಿಶೇಷ ಆಹ್ವಾನಿತರಾಗಿ ವೀರಶೈವ ಮಹಿಳಾ ಸಮಾಜದ ಕಾರ್ಯದರ್ಶಿ ಮಂಜುಳಾಕೆ.ಸಿ.ನಾಗರಾಜು, ಗೌರವಾಧ್ಯಕ್ಷ ಅನ್ನಪೂರ್ಣಪ್ರಕಾಶ್, ಮಾಜಿ ಅಧ್ಯಕ್ಷೆ ಪಾರ್ವತಮ್ಮಮಂಡಿಮಠ, ಗ್ರಾಮಾಂತರ ಅಧ್ಯಕ್ಷ ಕಿರಣ್‌ಶಂಕರ್, ವೀರಶೈವ ವಿದ್ಯಾರ್ಥಿನಿಲಯ ಅಧ್ಯಕ್ಷ ಎನ್.ಸತೀಶ್‌ಬಾಬು, ವೀರಶೈವ ಬ್ಯಾಂಕ್ ಅಧ್ಯಕ್ಷ ಎಸ್.ಜಯಪ್ರಕಾಶ್, ದಲ್ಲಾಲರ ಸಂಘದ ಅಧ್ಯಕ್ಷ ಕೆ.ಎಂ.ಅರವಿಂದ, ಕೆಜಿಟಿ ಸುರೇಶ್, ಎಂ.ವಿ.ವಿಜಯೇಂದ್ರ, ಕೆ.ನಾಗೇಶ್, ಕೆ.ಜಿ.ತಿಪ್ಪೇಸ್ವಾಮಿ ಮುಂತಾದವರು ಕಾರ್ಯಕ್ರಮದಲ್ಲಿ ಭಾಗವಹಿಸುವರು. ಮೇಲ್ಜಾವಣಿ ದಾನಿ ನೇತ್ರಸುರೇಶ್‌ರವರನ್ನು ಸನ್ಮಾನಿಸಲಾಗುವುದು. ಮೇ.10ರ ಶುಕ್ರವಾರ ಬೆಳಗ್ಗೆ 11ಕ್ಕೆ ಧಾರ್ಮಿಕ ಸಭೆ ಆಯೋಜಿಸಿದ್ದು ಮೈಸೂರಿನ ರಾಜನಹಳ್ಳಿಯ ಬಸವಧ್ಯಾನ ಮಂದಿರದ ಬಸವಲಿಂಗಮೂರ್ತಿ ಸ್ವಾಮಿಗಳ ದಿವ್ಯಸಾನಿಧ್ಯದಲ್ಲಿ ಕಾರ್ಯಕ್ರಮ ನಡೆಯಲಿದ್ದು, ಅಧ್ಯಕ್ಷೆಯನ್ನು ಸಂಘದ ಅಧ್ಯಕ್ಷ ಕೆ.ಸಿ.ನಾಗರಾಜು ವಹಿಸುವರು, ಸಹ ಪ್ರಾಧ್ಯಾಪಕ ಡಾ.ಎ.ಮೋಹನ್ ಉಪನ್ಯಾಸ ನೀಡುವರು. ವಿಶೇಷ ಆಹ್ವಾನಿತರಾಗಿ ವೀರಶೈವ ಲಿಂಗಾಯಿತ ನೌಕರರ ಸಂಘದ ಅದ್ಯಕ್ಷ ಸಿ.ಗುರುಸಿದ್ದಮೂರ್ತಿ, ವಿ.ಮಂಜುನಾಥ, ಎಚ್.ಪ್ರಸನ್ನಕುಮಾರ್, ವಕೀಲರ ಸಂಘದ ಅಧ್ಯಕ್ಷ ಕೆ.ಎಂ.ನಾಗರಾಜು, ರಿಯಲ್‌ಎಸ್ಟೇಟ್ ಉದ್ಯಮಿ ರೇವಣ್ಣ, ಎಚ್.ಎಲ್.ಅಶೋಕ್, ಸತ್ಯಾನಂದ, ನಗರಸಭಾ ಸದಸ್ಯ ಸಿ.ಎಂ.ವಿಶುಕುಮಾರ್ ಮುಂತಾದವರು ಕಾರ್ಯಕ್ರಮದಲ್ಲಿ ಭಾಗವಹಿಸುವರು. ಪತ್ರಿಕಾಗೋಷ್ಠಿಯಲ್ಲಿ ಕಾರ್ಯದರ್ಶಿ ಹೊಸಮನೆಸ್ವಾಮಿ ಸಂಘದ ಗೌರವಾಧ್ಯಕ್ಷ ವಂದನರಾಜು, ಉಪಾಧ್ಯಕ್ಷ ಕೆ.ಎಂ. ಜಗದೀಶ್, ಈಶ್ವರಪ್ಪ, ವೃಷಬೇಂದ್ರಪ್ಪ, ಕೆ.ಟಿ.ಶಿವಕುಮಾರ್, ಎಚ್.ಮಂಜುನಾಥ, ಡಾ.ಜಿ.ವಿ.ರಾಜಣ್ಣ, ಪಿ.ಜಗದೀಶ್, ಲೋಕೇಶ್, ಜಿ.ಟಿ.ಮಲ್ಲಿಕಾರ್ಜುನ್, ಮಹಾತ್ಮಶ್ರೀ ಎನ್.ಮಂಜುನಾಥ, ವಾಸುದೇವ್, ಎ.ವಿಜಯೇಂದ್ರ, ಕೆ.ಎಂ. ಕೊಟ್ರೇಶ್, ಗುಣಶೇಖರ ಮುಂತಾದವರು ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಶ್ರೀ ಶಂಕರಾಚಾರ್ಯ ಜಯಂತಿ

» ಚಿತ್ರದುರ್ಗ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರಸಭೆ ವತಿಯಿಂದ ಇದೇ ಮೇ.12ರಂದು ಬೆಳಿಗ್ಗೆ 11 ಗಂಟೆಗೆ ಚಿತ್ರದುರ್ಗ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶ್ರೀ ಶಂಕರಾಚಾರ್ಯ ಜಯಂತಿ ಆಯೋಜಿಸಲಾಗಿದೆ. ಲೋಕಸಭಾ ಚುನಾವಣಾ ನೀತಿ ಸಂಹಿತೆ ಜಾರಿಯಿರುವ ಹಿನ್ನಲೆಯಲ್ಲಿ ಶ್ರೀ ಶಂಕರಾಚಾರ್ಯ ಜಯಂತಿಯನ್ನು ಸರಳವಾಗಿ ಶ್ರೀ ಶಂಕರಾಚಾರ್ಯರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವ ಮೂಲಕ ಆಚರಿಸಲಾಗುವುದು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ರವಿಚಂದ್ರ ತಿಳಿಸಿದ್ದಾರೆ.

### ಮಳೆ ನೀರು ಚರಂಡಿಗಳನ್ನು ಸ್ವಚ್ಛಗೊಳಿಸಿದ ಪುರಸಭೆ




» ಹೊಸದುರ್ಗ

ಹೊಸದುರ್ಗ ಪುರಸಭಾ ವ್ಯಾಪ್ತಿಯಲ್ಲಿ 23 ವಾರ್ಡ್‌ಗಳಿದ್ದು ಮುಂಗಾರು ಮಳೆ ಪ್ರಾರಂಭವಾಗುವ ಮುನ್ಸೂಚನೆ ಇರುವುದರಿಂದ ಸರ್ಕಾರದ ಮಾರ್ಗಸೂಚಿಯಂತೆ ಜಿಲ್ಲಾಧಿಕಾರಿಗಳು ಅಗತ್ಯ ಮುಂಜಾಗ್ರತೆ ಕ್ರಮಗಳನ್ನು ಕೈಗೊಳ್ಳಲು ಜಿಲ್ಲಾ ಯೋಜನಾ ನಿರ್ದೇಶಕರನ್ನು ಒಳಗೊಂಡಂತೆ ವಿವಿಧ ಇಲಾಖೆಗಳು ಸಮನ್ವಿಯತೆ ಸಾಧಿಸಲು ಸಭೆ ಕರೆಯಲಾಗಿದ್ದು, ಪುರಸಭೆಯಿಂದ ಪಟ್ಟಣದ ವ್ಯಾಪ್ತಿಯಲ್ಲಿರುವ ರಾಜಕಾಲುವೆ ಹಾಗೂ ಮಳೆನೀರು ಚರಂಡಿಗಳನ್ನು ಜೆಸಿಬಿ ಯಂತ್ರದ ಮೂಲಕ ಖಾಸಗಿ ಬಸ್ ನಿಲ್ದಾಣದ ಸಮೀಪದಲ್ಲಿರುವ ಚರಂಡಿ ಹೂಳು ತೆಗೆದು ಕಸ-ಕಡ್ಡಿ ತೆರವುಗೊಳಿಸಿ ನೀರು ಸರಾಗವಾಗಿ ಹರಿಯುವಂತೆ ಮಾಡುವ ಕೆಲಸವನ್ನು ಖುದ್ದು ಮುಖ್ಯಾಧಿಕಾರಿಯಾದ ತಿಮ್ಮರಾಜು ಜಿ.ವಿ ರವರು ವೀಕ್ಷಿಸಿ ಪಟ್ಟಣದ ಉಳಿದ ಎಲ್ಲಾ ಚರಂಡಿಗಳನ್ನು 3 ದಿನಗಳೊಳಗಾಗಿ ಕಟ್ಟುನಿಟ್ಟಿನ ಸೂಚನೆಯನ್ನು ಆರೋಗ್ಯ ನಿರೀಕ್ಷಕರಿಗೆ ನೀಡಿ ಸಾರ್ವಜನಿಕರು ಹಾಗೂ ಪಟ್ಟಣದ ನಗರವಾಸಿಗಳು ಯಾವುದೇ ಆತಂಕಕ್ಕೆ ಒಳಗಾಗದೇ ಹೆಚ್ಚು ನೀರು ಸಂಗ್ರಹವಾಗಿರುವುದು ಮನೆ ಒಳಗೆ ನೀರು ನುಗ್ಗಿದಲ್ಲಿ ಅಥವಾ ಪ್ರವಾಹ ಸಂಧರ್ಭ ಉದ್ಭವಿಸಿದಲ್ಲಿ ಇತರೆ ತುರ್ತು ಸಂಧರ್ಭ ಕಂಡುಬಂದಲ್ಲಿ ಪುರಸಭೆಯಿಂದ ತೆರೆಯಲಾಗಿರುವ ಸಹಾಯವಾಣಿ ಸಂಖ್ಯೆ: 08199-295095 ಗೆ ಸಂಪರ್ಕಿಸುವುದು ಮತ್ತು ಈಗಾಗಲೇ ಜೆಸಿಬಿ ಇತರೆ ಸಲಕರಣೆಗಳು ಹೊಂದಿರುವ ಆರೋಗ್ಯ ನಿರೀಕ್ಷಕರು, ಕಂದಾಯ ಅಧಿಕಾರಿಯ ನೇತೃತ್ವದಲ್ಲಿ 2 ಟಾಸ್ಕ್ ಫೋರ್ಸ್‌ಗಳನ್ನು ತಂಡಗಳನ್ನು ರಚಿಸಲಾಗಿದ್ದು ಸಹಕಾರಪಡೆದು ಮುಂಗಾರು ಮಳೆ ಹಾನಿ ತಡೆಗಟ್ಟಲು ಪುರಸಭೆಯೊಂದಿಗೆ ಕೈಜೋಡಿಸುವಂತೆ ಮನವಿ ಮಾಡಿದರು. ಈ ಸಂಧರ್ಭದಲ್ಲಿ ಆರೋಗ್ಯ ನಿರೀಕ್ಷಕರಾದ ಬಸವರಾಜು, ಕಂದಾಯಾಧೀಕಾರಿಯಾದ ಯೋಗೇಶ್ ಎಲ್ ಹಾಗೂ ಇನ್ನಿತರರು ಹಾಜರಿದ್ದರು.

### ಎಸ್‌ಐಟಿ ಪ್ರಕರಣಗಳಿಗೆ ಇಬ್ಬರು ಹೆಚ್ಚುವರಿ ವಿಶೇಷ ಅಭಿಯೋಜಕರ ನೇಮಕ

» ಬೆಂಗಳೂರು

ಹಾಸನ ಸಂಸದ ಪ್ರಜ್ವಲ್ ರೇವಣ್ಣ ಅವರು ಲೈಂಗಿಕ ದೌರ್ಜನ್ಯ ನಡೆಸಿದ್ದಾರೆಂಬ ಆರೋಪದ ಪ್ರಕರಣಗಳ ತನಿಖೆಗೆ ರಚಿಸಲಾಗಿರುವ ವಿಶೇಷ ತನಿಖಾ ದಳವು ದಾಖಲಿಸುವ ಪ್ರಕರಣಗಳಲ್ಲಿ ನ್ಯಾಯಾಲಯದಲ್ಲಿ ಹಾಜರಾಗಲು ಹಾಗೂ ಪ್ರಕರಣಗಳನ್ನು ನಡೆಸಲು ಸರ್ಕಾರಿ ಅಭಿಯೋಜಕರ ತಂಡವನ್ನು ಬಲಪಡಿಸುವ ಉದ್ದೇಶದಿಂದ ಹಿರಿಯ ವಕೀಲರಾದ ಶ್ರೀ ಅಶೋಕ್ ನಾಯಕ್ ಹಾಗೂ ಶ್ರೀಮತಿ ಜಯನಾ ಕೊಠಾರಿ ಅವರನ್ನು ಹೆಚ್ಚುವರಿ ವಿಶೇಷ ಸರ್ಕಾರಿ ಅಭಿಯೋಜಕರನ್ನಾಗಿ ನೇಮಕ ಮಾಡಿ ಸರ್ಕಾರ ಆದೇಶ ಹೊರಡಿಸಿದೆ.

### ಶಿವಮೊಗ್ಗ: ಮೆಸ್ಕಾಂ ಜನಸಂಪರ್ಕ ಸಭೆ

» ಶಿವಮೊಗ್ಗ

ಶಿವಮೊಗ್ಗ ಮೆಸ್ಕಾಂ ನಗರ ಉಪವಿಭಾಗ ವ್ಯಾಪ್ತಿಯಲ್ಲಿ ಬರುವಂತಹ ವಿದ್ಯುತ್ ಗ್ರಾಹಕರ ಕುಂದು ಕೊರತೆಗಳನ್ನು ಪರಿಹರಿಸಲು ಹಾಗೂ ತುರ್ತು ಕ್ರಮಗಳನ್ನು ತೆಗೆದುಕೊಳ್ಳುವ ಸಲುವಾಗಿ ಮೇ-09 ರಂದು ಬೆಳಗ್ಗೆ 11.00 ರಿಂದ 1.00 ರವರೆಗೆ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್‌ರವರ ಕಚೇರಿ, ನಉಪವಿ-2, ಎನ್.ಟಿ.ರಸ್ತೆ, ನ್ಯೂಮಂಡ್ಲಿ, ಶಿವಮೊಗ್ಗ ಇಲ್ಲಿ ಜನಸಂಪರ್ಕ ಸಭೆಯನ್ನು ಏರ್ಪಡಿಸಲಾಗಿದೆ.

# ಆರಂಭದ ಮಳೆಯಿಂದ ರೈತರಿಗೆ ಅಪಾರ ಹಾನಿ

## ತೋಟ, ಹೊಲಗಳಲ್ಲಿ ಬಿರುಗಾಳಿ ನೆಲಕ್ಕೆ ಹೊರಗಿದ ದಾಳಿಂಬೆ, ಬಾಳೆ, ಪಪ್ಪಾಯ, ಮೆಕ್ಕೆಜೋಳ : ಒಂದುಕೋಟಿಗೂ ಹೆಚ್ಚು ನಷ್ಟ

» ಚಳ್ಳಕೆರೆ

ತಾಲ್ಲೂಕಿನಾದ್ಯಂತ ಕೆಲವು ಭಾಗಗಳಲ್ಲಿ ಮಾತ್ರ ಬಿರುಗಾಳಿ, ಸಿಡಿಲಿನಿಂದ ಕೂಡಿದ ಮಳೆಗೆ ಬೆಳೆ ಹಾನಿ ಹೆಚ್ಚಾಗಿ ಹಲವಾರು ರೈತರ ಫಸಲಿಗೆ ಬಂದಿದ್ದ ಬೆಳೆಗಳು ನೆಲಕಚ್ಚಿ ಲಕ್ಷಾಂತರ ರೂಪಾಯಿ ನಷ್ಟ ಸಂಭವಿಸಿದೆ. ವಿಶೇಷವಾಗಿ ಪರಶುರಾಮಪುರ ಮತ್ತು ದೇವರ ಮರಿಕುಂಟೆ ಸುತ್ತಮುತ್ತಲ ಪ್ರದೇಶದಲ್ಲಿ ಒಟ್ಟು 54.04 ಎಂ.ಎಂ. ಮಳೆಯಾಗಿದ್ದು, ಸಿಡಿಲು, ಗಾಳಿಗೆ ಬಹುತೇಕ ತೋಟದಲ್ಲಿದ್ದ ಬೆಳೆಗಳು ಸಂಪೂರ್ಣ ನಾಶವಾಗಿವೆ.

ಮಂಗಳವಾರ ರಾತ್ರಿ ಬಿದ್ದ ಮಳೆಗೆ ತಾಲ್ಲೂಕಿನ ರೇಣುಕಾಪುರ ಗ್ರಾಮದ ರಾಜಣ್ಣ ಎಂಬುವವರ ರಿ.ಸರ್ವೆ ನಂ. 62/6ರಲ್ಲಿ ನಾಲ್ಕು ಎಕರೆ ಪ್ರದೇಶದ ರೇಷ್ಮೆ ಗೂಡಿ ಗಾಳಿ ಮಳೆಗೆ ರೇಷ್ಮೆಗೂಡಿನ ಶೆಡ್ ಸಂಪೂರ್ಣ ನೆಲಕಚ್ಚಿ ಸುಮಾರು 5 ಲಕ್ಷ ಸಂಭವಿಸಿದೆ ಎನ್ನಲಾಗಿದೆ. ಚನ್ನಮ್ಮನಾಗತಿಹಳ್ಳಿ ಕಾವಲಿನಲ್ಲಿ ಭೂಲಿಂಗಪ್ಪ ಎಂಬುವವ ರಿ.ಸರ್ವೆ ನಂ115ರ ನಾಲ್ಕು ಎಕರೆ ಬಾಳೆ ತೋಟ ಗಾಳಿಗೆ ಸಿಕ್ಕು ಸಂಪೂರ್ಣ ನೆಲಕುರುಳಿ 2 ಲಕ್ಷ ನಷ್ಟ ಸಂಭವಿಸಿದೆ. ದಾಸರ್ಲಹಳ್ಳಿಯ ಶಾಂತಮ್ಮ, ಓಬಳಾಪುರ ಗ್ರಾಮದ ರೇಣುಕಮ್ಮ, ಶಾಂತಮ್ಮ ಎಂಬುವವರ





ಮನೆಗಳ ಸೀಟು ಹಾರಿಹೋಗಿ, ಗೋಡೆ ಕುಸಿದು ಒಟ್ಟು 1.20 ಲಕ್ಷ ನಷ್ಟ ಸಂಭವಿಸಿದೆ.

ಕಾಟಂದೇವರಕೋಟೆಯಲ್ಲಿ ರಾಜಪ್ಪ ಎಂಬುವವರ ರಿ.ಸರ್ವೆ ನಂ. 98/3ರಲ್ಲಿ ಮೂರು ಎಕರೆ ಮೆಕ್ಕೆಜೋಳ ನೆಲಕಚ್ಚಿ 80 ಸಾವಿರ ನಷ್ಟ ಸಂಭವಿಸಿದೆ, ಓ.ಪಾಲಮ್ಮ ರಿಸರ್ವೆ ನಂ 52/4ರ ಎರಡು ಎಕರೆ ಪಪ್ಪಾಯ ಗಾಳಿಗೆ ಬಿದ್ದು 60 ಸಾವಿರ ನಷ್ಟ ಸಂಭವಿಸಿದೆ. ಓ.ಶಿವಣ್ಣ ಎಂಬುವವರ ರಿ.ಸರ್ವೆ ನಂ.103/03ರ ಮೂರು ಎಕರೆ ಪ್ರದೇಶದ ಪಪ್ಪಾಯ ನೆಲಕಚ್ಚಿ 80 ಸಾವಿರ ನಷ್ಟ ಸಂಭವಿಸಿದೆ. ಶ್ರೀನಿವಾಸ್



ಎಂಬುವವರ 103/13ರ ಜಮೀನಿನಲ್ಲಿದ್ದ ದಾಳಿಂಬೆ ನಾಶವಾಗಿ 80 ಸಾವಿರ ನಷ್ಟ ಸಂಭವಿಸಿದೆ.

ಸಿ.ಟಿ.ಅಶ್ವತರೆಡ್ಡಿ ರಿ.ಸರ್ವೆ ನಂ 15/1ಡಿಯಲ್ಲಿದ್ದ ಅಡಿಕೆ ಮತ್ತು ಬಾಳೆ ಬೆಳೆ ನೆಲಕಚ್ಚಿ 1.50 ಲಕ್ಷ ನಷ್ಟವಾಗಿದೆ.

ಓಬಳಾಪುರ ಗ್ರಾಮದ ನರಸಿಂಹಪ್ಪ ಎಂಬುವವರ ರಿ.ಸರ್ವೆ ನಂ 83/7ರ ಜಮೀನಿನಲ್ಲಿದ್ದ ಮೆಕ್ಕೆಜೋಳ ನೆಲಕಚ್ಚಿ 20ಸಾವಿರನಷ್ಟ ಸಂಭವಿಸಿದೆ,

ತಿಮ್ಮಪ್ಪ ಎಂಬುವವರ ರಿ.ಸರ್ವೆ ನಂ 84/2ರ ಮೂರು ಎಕರೆ ಪ್ರದೇಶದ ಮೆಕ್ಕೆಜೋಳ ಗಾಳಿಗೆ ಮುರಿದು 90 ಸಾವಿರ ನಷ್ಟವಾಗಿದೆ. ಲಿಂಗರಾಜು ಎಂಬುವವರ 84/2ರ 5 ಎಕರೆ ಪ್ರದೇಶದ ಮೆಕ್ಕೆಜೋಳ ಮಳೆಗೆ ಸಿಲುಕಿ 1.50 ಲಕ್ಷ ನಷ್ಟವಾಗಿದೆ. ಜಿ.ಎಲ್.ಗವಿಸಿದ್ದಪ್ಪ ಎಂಬುವವರ ರಿ.ಸರ್ವೆ ನಂ 22/2ರಲ್ಲಿದ್ದ 41 ಅಡಿಕೆ ಗಿಡ ನಾಶವಾಗಿದೆ. ಮಂಜುನಾಥ 30 ಅಡಿಗೆ ಗಿಡಗಳು ಮುರಿದು 40 ಸಾವಿರ ನಷ್ಟ ಸಂಭವಿಸಿದೆ.

ವಿ.ಹನುಮಪ್ಪ ರಿಸರ್ವೆ ನಂ 131/13ರ 1.26 ಎಕರೆ ಪ್ರದೇಶದ ಬಾಳೆ ನೆಲಕಚ್ಚಿ 1.50ಲಕ್ಷ ನಷ್ಟ ಸಂಭವಿಸಿದೆ. ವೆಂಕಟೇಶ್ ಎಂಬುವವರ 131/1ರ ಬಾಳೆ ನೆಲಕಚ್ಚಿ 1.50 ಲಕ್ಷ ನಷ್ಟವಾಗಿದೆ.

# ಇಂದು ಎಸ್‌ಎಸ್‌ಎಲ್‌ಸಿ ಫಲಿತಾಂಶ ಪ್ರಕಟ

» ಬೆಂಗಳೂರು

ಕರ್ನಾಟಕ ಶಾಲಾ ಪರೀಕ್ಷೆಗಳು ಮತ್ತು ಮೌಲ್ಯಮಾಪನ ಮಂಡಳಿಯು 2024ನೇ ಸಾಲಿನ SSLC ಫಲಿತಾಂಶವನ್ನು ನಾಳೆ ಬೆಳಗ್ಗೆ 10.30 ಗಂಟೆಗೆ ಪ್ರಕಟಿಸಲಿದೆ.ರಾಜ್ಯಾದ್ಯಂತ 10 ನೇ ತರಗತಿ ಬೋರ್ಡ್ ಪರೀಕ್ಷೆಗೆ ಹಾಜರಾದ ಅಭ್ಯರ್ಥಿಗಳು ಕೆಎಸ್‌ಇಎಬಿ 10 ನೇ ತರಗತಿ ಫಲಿತಾಂಶಗಳನ್ನು ಕರ್ನಾಟಕ ಫಲಿತಾಂಶಗಳ ಅಧಿಕೃತ ವೆಬ್ ಸೈಟ್ ಇಚಿಡಿಡಿeಣಟಣ. ಟುಛಿಿಿಟ ನಲ್ಲಿ ಫಲಿತಾಂಶ ನೋಡಬಹುದು. SSLC ಪರೀಕ್ಷೆಗೆ ರಾಜ್ಯಾದ್ಯಂತ ಒಟ್ಟು 8,69,968 ವಿದ್ಯಾರ್ಥಿಗಳು ನೋಂದಣಿ ಮಾಡಿಕೊಂಡಿದ್ದರು. ಅದರದಲ್ಲಿ 4,41,910 ಬಾಲಕರಾದರೆ, 4,28,058 ಬಾಲಕಿಯರು. ಒಟ್ಟು ವಿದ್ಯಾರ್ಥಿಗಳ ನೋಂದಣಿಯಲ್ಲಿ 8,10,368 ಸರ್ಕಾರಿ ಶಾಲಾ ವಿದ್ಯಾರ್ಥಿಗಳು, 18,225 ಖಾಸಗಿ ವಿದ್ಯಾರ್ಥಿಗಳು ಹಾಗೂ 41,375 ಪುನರಾವರ್ತಿತ ವಿದ್ಯಾರ್ಥಿಗಳು ಪರೀಕ್ಷೆಗೆ ನೋಂದಾಯಿಸಿಕೊಂಡಿದ್ದರು.

ಮಾರ್ಚ್/ಏಪ್ರಿಲ್ 2024ರ ಎಸ್.ಎಸ್.ಎಲ್.ಸಿ ಪರೀಕ್ಷೆ-1 ನ್ನು ದಿನಾಂಕ:25.03.2024 ರಿಂದ 06.04.2024 ರವರೆಗೆ ನಡೆಸಲಾಯಿತು. ಎಲ್ಲಾ ವಿಷಯಗಳ ಉತ್ತರ ಪತ್ರಿಕೆಗಳ ಮೌಲ್ಯಮಾಪನ ಕಾರ್ಯವು ಮುಕ್ತಾಯವಾಗಿರುತ್ತದೆ. ಎಸ್.ಎಸ್.ಎಲ್.ಸಿ ಪರೀಕ್ಷೆ-1ರ ಫಲಿತಾಂಶ ಪ್ರಕಟಿಸುವ ಸಂಬಂಧ ದಿನಾಂಕ: 09.05.2024 ರಂದು ಬೆಳಗ್ಗೆ 10.30 ಗಂಟೆಗೆ ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಲಿ, 6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಃಂಟಿಃಚಿಟಿuಡಿ-560003. ಇಲ್ಲಿ ಸುದ್ದಿಗೋಷ್ಠಿಯನ್ನು ಕರೆಯಲಾಗಿದೆ.

ಫಲಿತಾಂಶವನ್ನು https://karresults.nic.in ಜಾಲತಾಣದಲ್ಲಿ ದಿನಾಂಕ:09.05.2024ರ ಬೆಳಗ್ಗೆ 10.30 ಗಂಟೆಯ ನಂತರ ವೀಕ್ಷಿಸಬಹುದಾಗಿದೆ.

**ಈ ರೀತಿ ರಿಸಲ್ಟ್ ಚೆಕ್ ಮಾಡಿ:** ಅಧಿಕೃತ ಇಲಾಖೆಯ ಅಧಿಕೃತ ವೆಬ್‌ಸೈಟ್‌ಗಳಾದ kseab.karnataka.gov.in ಮತ್ತು karresults.nic.in ಗಳಲ್ಲಿ ವೀಕ್ಷಿಸಲು ಮತ್ತು ಡೌನ್‌ಲೋಡ್ ಮಾಡಲು ಅವಕಾಶವಿದೆ ಎಂದು ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯಮಾಪನ ಮಂಡಳಿ ತಿಳಿಸಿದೆ.

**ಫಲಿತಾಂಶ ನೋಡುವುದು, ಡೌನ್‌ಲೋಡ್ ಮಾಡುವುದು ಹೇಗೆ?:** ಅಧಿಕೃತ ವೆಬ್‌ಸೈಟ್ karresults.nic.in ಗೆ ಭೇಟಿ ನೀಡಿ. ಮುಖಪುಟದಲ್ಲಿ SSLC Results 2024 ಲಿಂಕ್ ಅನ್ನು ಕ್ಲಿಕ್ ಮಾಡಿ ಹೊಸ ಲಾಗಿನ್ ಪುಟವು ತೆರೆಯುತ್ತದೆ. ನಿಮ್ಮ ಅಪ್ಲಿಕೇಶನ್ ಸಂಖ್ಯೆ ಮತ್ತು ಜನ್ಮ ದಿನಾಂಕವನ್ನು ನಮೂದಿಸಿ ಆಗ ಫಲಿತಾಂಶ ಕಾಣಿಸಿಕೊಳ್ಳುತ್ತದೆ, ಅಲ್ಲಿ ಡೌನ್ ಲೋಡ್ ಮಾಡಬಹುದು.

## ಎಸ್‌ಆರ್‌ಎಸ್ ಶಾಲೆ ಬಳಿ ಬೈಕ್ ಹಾಗೂ ಆಟೋಗೆ ಡಿಕ್ಕಿ ಹೊಡೆದ ಲಾರಿ: ಬೈಕ್ ಸವಾರ ಸಾವು



» ಚಳ್ಳಕೆರೆ

ಚಳ್ಳಕೆರೆಯಿಂದ ಹಿರಿಯೂರಿಗೆ ಹೋಗುವ ರಾಷ್ಟ್ರೀಯ ಹೆದ್ದಾರಿ 150(ಎ) ಎಸ್‌ಆರ್‌ಎಸ್ ಶಾಲೆಯ ಬಳಿ ಮೋಟಾರ್ ಬೈಕ್‌ಗೆ ಲಾರಿ ಡಿಕ್ಕಿಪಡಿಸಿದ ಪರಿಣಾಮವಾಗಿ ಬೈಕ್ ಚಾಲಕ ಮದಕರಿ ನಗರದ ಕೂಲಿಕಾರ್ಮಿಕ ಬಿ.ಅರುಣ್ ಸ್ಥಳದಲ್ಲೇ ಮೃತಪಟ್ಟಿರುತ್ತಾನೆ. ಲಾರಿ ಚಾಲಕ ರಾಮಲಕನ್ ತನ್ನ ವಾಹನವನ್ನು ಅತಿವೇಗದಿಂದ ಚಾಲನೆ ಮಾಡಿಕೊಂಡು ಬಂದು ಎದುರಿಗೆ ಬರುತ್ತಿದ್ದ ಮೋಟಾರ್ ಬೈಕ್ ಹಾಗೂ ಆಟೋರಿಕ್ಷಾಕ್ಕೆ ಡಿಕ್ಕಿ ಪಡಿಸಿದ್ದಾನೆ. ಡಿಕ್ಕಿ ರಭಸಕ್ಕೆ ಬೈಕ್ ಚಾಲಕ ಅರುಣ್ ತೀರ್ವರಕ್ತಗಾಯದಿಂದ ನರಳುತ್ತಿದ್ದು ಅವನನ್ನು ಸಾರ್ವಜನಿಕ ಆಸ್ಪತ್ರೆಗೆ ದಾಖಲಿಸುವಷ್ಟರಲ್ಲಿ ಮೃತಪಟ್ಟಿರುತ್ತಾನೆ. ಆಟೋಚಾಲಕ ಕೋನಸಾಗರದ ಮೋಹನ್(40) ಆಸ್ಪತ್ರೆಗೆ ದಾಖಲಾಗಿ ಚಿಕಿತ್ಸೆ ಪಡೆಯುತ್ತಿದ್ದಾನೆ. ಘಟನೆ ನಡೆದ ಸ್ಥಳಕ್ಕೆ ಪೊಲೀಸ್ ವೃತ್ತನಿರೀಕ್ಷಕ ಕೆ.ಕುಮಾರ್ ಭೇಟಿ ನೀಡಿ ಪರಿಶೀಲನೆ ನಡೆಸಿದರು.




ಹೊಸದುರ್ಗ ಪಟ್ಟಣದ ಗ್ರಾಮ ದೇವತೆಯಾದ ಶ್ರೀ ದುರ್ಗಾಂಬಿಕಾ ದೇವಿಯವರ ರಥೋತ್ಸವದ ಅಂಗವಾಗಿ ಪಟ್ಟಣದ ಖಾಸಗಿ ಬಸ್ ನಿಲ್ದಾಣದ ಏಜಂಟರಿಂದ ಮಜ್ಜಿಗೆ ಸೇವೆ ನಡೆಯಿತು.



ಹೊಸದುರ್ಗ ಪಟ್ಟಣದಲ್ಲಿ ಮಂಗಳವಾರ ಜರುಗಿದ ಶ್ರೀ ದುರ್ಗಾಂಬಿಕಾ ರಥೋತ್ಸವದಲ್ಲಿ ಅರುಣಗೋವಿಂದಪ್ಪ ಅವರು ಮುಕ್ತಿ ಬಾವುಟ ಪಡೆದುಕೊಂಡರು. ಮುಕ್ತಿ ಬಾವುಟ ಪಡೆದ ಯುವ ನಾಯಕ ಅರುಣ್‌ಗೋವಿಂದಪ್ಪ

## ಮುಕ್ತಿ ಬಾವುಟ ಪಡೆದ ಯುವ ನಾಯಕ ಅರುಣ್‌ಗೋವಿಂದಪ್ಪ

**ಹೊಸದುರ್ಗ:** ಪಟ್ಟಣದಲ್ಲಿ ನಡೆಯುತ್ತಿರುವ ಶ್ರೀ ದುರ್ಗಾಂಬಿಕಾ ದೇವಿಯ ಜಾತ್ರಾ ಮಹೋತ್ಸವ ಕಾರ್ಯಕ್ರಮದಲ್ಲಿ ಮಂಗಳವಾರ ಬೆಳಿಗ್ಗೆ ಜರುಗಿದ ದೇವಿಯ ವೈಭವಯುತ ರಥೋತ್ಸವದಲ್ಲಿ ರಥೋತ್ಸವಕ್ಕೂ ಮುನ್ನ ನಡೆದ ಮುಕ್ತಿ ಬಾವುಟ ಹರಾಜಿನಲ್ಲಿ ಮಕ್ತಿ ಬಾವುಟವನ್ನ ಶಾಸಕ ಬಿ.ಜಿ.ಗೋವಿಂದಪ್ಪ ಅವರ ಪುತ್ರ ಯುವ ನಾಯಕ ಅರುಣ ಗೋವಿಂದಪ್ಪ ಅವರು 1 ಲಕ್ಷ ರೂಗಳಿಗೆ ಪಡೆದುಕೊಂಡರು. ಈ ಸಂಧರ್ಬದಲ್ಲಿ ಅವರ ಅಪ್ತರುಗಳು ದೇವಸ್ಥಾನ ಸಮಿತಿಯವರು ಉಪಸ್ಥಿತರಿದ್ದರು. ರಥೋತ್ಸವದ ಮುಕ್ತಿ ಬಾವುಟ ಹರಾಜನ್ನು ಕಳೆದ ಮೂರು ವರ್ಷಗಳಿಂದಲೂ ಸಹಾ ನಡೆಸಿಕೊಂಡು ಬರಲಾಗುತ್ತಿದೆ ಎಂದು ದೇವಸ್ಥಾನ ಸಮಿತಿಯ ಧರ್ಮಧರ್ಶಿ ಅಗ್ರೋ ಹೆಚ್.ಶಿವಣ್ಣ ತಿಳಿಸಿದರು.

## ಪ್ರಮುಖ ಸುದ್ದಿ

# ಭವ್ಯವಾಗಿ ಜರುಗಿದ ಶ್ರೀ ದುರ್ಗಾಂಬಿಕಾ ದೇವಿ ರಥೋತ್ಸವ

» ನಾಗತಿಹಳ್ಳಿಮಂಜುನಾಥ್

ಹೊಸದುರ್ಗ: ಪಟ್ಟಣದ ಗ್ರಾಮ ದೇವತೆಯಾದ ಶ್ರೀ ದುರ್ಗಾಂಬಿಕ ದೇವಿಯವರ ರಥೋತ್ಸವವು ಸಹಸ್ರ ಸಂಖ್ಯೆಯ ಭಕ್ತರ ಸಮ್ಮುಖದಲ್ಲಿ ಅತ್ಯಂತ ವೈಭವಯುತವಾಗಿ ಜರುಗಿತು.


ಭವ್ಯವಾದ ದೇವಿ ರಥವನ್ನು ಮಂಗಳ ದ್ರವ್ಯಗಳಿಂದ ಹಾಗೂ ವರ್ಣರಂಜಿತ ಪುಷ್ಪ ಮತ್ತು ರಂಗುರಂಗಿನ ವಸ್ತ್ರಗಳಿಂದ ಶೃಂಗರಿಸಿ ಕಳಸ ಸ್ಥಾಪನೆ ಮಾಡಲಾಗಿತ್ತು.

ರಥದ ಸುತ್ತ ಹಸಿರು ತಳಿರು ತೋರಣಗಳಿಂದ ಚಿತ್ತಾಕರ್ಷಕವಾಗಿ ಆಲಂಕರಿಸಲಾಗಿತ್ತು. ರಥೋತ್ಸವದ ಅಂಗವಾಗಿ ಇಡೀ ಪಟ್ಟಣದಲ್ಲಿ ವೈವಿಧ್ಯಮಯ ವಿದ್ಯುತ್ ದೀಪಾಲಂಕಾರದಿಂದ ಕಂಗೊಳಿಸುತ್ತಿತ್ತು, ಜಾನಪದ ವಾದ್ಯಗಳ ನೀನಾದದೊಂದಿಗೆ ಶ್ರೀ ದುರ್ಗಾಂಬಿಕಾ ದೇವಿಯವರು ರಥಾರೋಹಣ ಮಾಡಿದರು. ಈ ದೃಶ್ಯವನ್ನ ನೋಡಲು ನೆರದಿದ್ದ ಭಕ್ತರು ನೂಕು ನೂಕಲಿನಲ್ಲೆ ಮುಗೆಬೀಳುತ್ತಿದ್ದರು ಅಪಾರ ಸಂಖ್ಯೆಯಲ್ಲಿ ಕಿಕ್ಕಿರಿದು ಸೇರಿದ್ದ ಜನಸ್ತೋಮ ರಥ ಎಳೆದ ನಂತರ ಬಂದಿದ್ದ ಭಕ್ತರು ತಮ್ಮ ಹರಕೆನ್ನ ಸಲ್ಲಿಸಿದರು.



ಬಾಳೆಹಣ್ಣುಗಳನ್ನು ತೂರುವುದರ ಮೂಲಕ ಭಕ್ತರು ತಮ್ಮ ಭಕ್ತಿಯನ್ನು ಸಮರ್ಪಿಸಿದರು.ಸಂಪ್ರದಾಯದಂತೆ ಶ್ರದ್ಧಾ ಭಕ್ತಿಯಿಂದ ನಡೆದ ರಥೋತ್ಸವದಲ್ಲಿ ಸಹಸ್ರಾರು ಭಕ್ತರು ತೇರು ಎಳೆದು ಪುನೀತರಾದರು. ದೇವಿಯ ರಥೋತ್ಸವವನ್ನು ನೋಡಲು ನಾಡಿನ ವಿವಿಧ ಮೂಲೆ ಮೂಲೆಗಳಿಂದ ಅಪಾರ ಜನ ಸೇರಿದ್ದರು. ತೇರು ಹರಿಯುವಾಗ ಭಕ್ತಾಧಿಗಳು ಕಾಯಿಯನ್ನು ರಥೋತ್ಸವ ಗಾಲಿಗಳಿಗೆ ಬಿಡುವಿಲ್ಲದಂತೆ ಒಡೆಯುತ್ತಿದ್ದರು. ತೆಂಗಿನಕಾಯಿಗಳನ್ನು ಹೊಡೆಯುವ ರಭಸಕ್ಕೆ ಕಾಯಿ ಚೂರುಗಳು ರಥೋತ್ಸವವನ್ನು ನೋಡಲು ನೆರದಿರುವ ಜನರ ಕೈಗೆ ಮೈಗೆ ತಾಕುತ್ತಲಿರುತ್ತದೆ. ಇನ್ನೂ ತೇರನ್ನು ಎಳೆಯುವಾಗಲಂತು ಜನರು "ಮರದ ಎಲೆಗಳು ಗಾಳಿಗೆ ಹಾರಿ ಬರುವಂತೆ" ಬಾಳೆ ಹಣ್ಣುಗಳನ್ನು ಗೊನೆಗಟ್ಟಲೇ ಖರೀದಿಸಿ ತೇರಿನ ಮೇಲೆ ತೂರುತ್ತಿದ್ದ ದೃಶ್ಯ ಅದ್ಭುತವಾಗಿತ್ತು.ಕೆಲವರು ತಮ್ಮ ತೊಂದರೆ ನಿವಾರಣೆಯಾದರೆ ಇಷ್ಟು ಗೊನೆ ದೇವಿಗೆ ಬಾಳೆಹಣ್ಣಿನ ಸೇವೆ ಮಾಡುತ್ತೇನೆ ಎಂದು ಹರಕೆ ಮಾಡಿಕೊಂಡಿರುತ್ತಾರೆ. ಅದರಂತೆ ತಾಯಿ ದೇವಿಯ ರಥೋತ್ಸವ ಬಂತೆಂದರೆ ಸಾಕು ಅಂದು ಬಾಳೆ ಹಣ್ಣಿನ ಸುಗ್ಗಿಯನ್ನೇ ಮಾಡಿ ಬಿಡುತ್ತಾರೆ. ರಥೋತ್ಸವ ಸಂಧರ್ಬದಲ್ಲಿ ದೇವಸ್ಥಾನ ಸಮಿತಿಯ ಧರ್ಮಧರ್ಶಿ ಅಗ್ರೋ ಹೆಚ್.ಶಿವಣ್ಣ, ದೇವಸ್ಥಾನ ಸಮಿತಿಯ ಹೊಸಹಳ್ಳಿ ಕೃಷ್ಣಪ್ಪ,ಅಂಗಡಿಸಿದ್ದಪ್ಪ ಕಮಿಟಿ ಸದಸ್ಯರು ಸೇರಿದಂತೆ ಜನಪ್ರತಿನಿಧಿಗಳು ಹಾಗೂ ಅಪಾರ ಸಂಖ್ಯೆಯ ಭಕ್ತ ಸಮೂಹ ಸೇರಿತ್ತು.ರಥೋತ್ಸವದ ವೇಳೆ ಸೋಮನ ಕುಣಿತ ಬಹು ಆರ್ಕಣಿಯವಾಗಿತ್ತು.

ಬ್ರಾಹ್ಮೀಮುಹೋರ್ತದಲ್ಲಿ ಬೆಳಗಿನ ಜಾವ 5 ಗಂಟಗೆ ರಥಾರೋಹಣ ಬೆಳಿಗ್ಗೆ 8 ಗಂಟಗೆ ರಥೋತ್ಸವ ನಂತರ ಇದೇ ದಿನ ಬೆಳಿಗ್ಗೆ 10 ಗಂಟೆಯಿಂದ ಪೋಲಿಸ್‌ಬಸವರಾಜ್ ಹಾಗೂ ತಂಡದವರಿಂದ ಸುಗಮ ಸಂಗೀತ ಕಾರ್ಯಕ್ರಮ 10.30 ಕ್ಕೆ ಪ್ರಸಾದ ವಿನಿಯೋಗ ನಡೆಯಿತು.ಬೆಳಿಗ್ಗೆ 10.30 ರಿಂದ ಪಟ್ಟಣದ ಖಾಸಗಿ ಬಸ್ ನಿಲ್ದಾಣದ ಏಜಂಟರಿಂದ ಮಜ್ಜಿಗೆ ಸೇವೆ,ನೆರಕೆ ಮನೆ ವಂಶಸ್ಥರಿಂದ ಪಾನಕ ಸೇವೆ,ಮಧ್ಯಾಹ್ನ 2 ಗಂಟೆಗೆ ಪನಕ ಬಂಡಿ, 3 ಗಂಟಗೆ ಬೇವಿನ ಸೀರೆ,ಸಂಜೆ 7 ಗಂಟೆಗೆ ಶ್ರೀ ದುರ್ಗಾಂಬಿಕಾ ಕೃಪಪೋಷಿತ ನಾಟಕ ಮಂಡಳಿಯವರಿಂದ ಕೆ.ಟಿ.ಸುಬ್ಬಯ್ಯನಬರ ಸಾರಥ್ಯದಲ್ಲಿ ಕುರುಕ್ಷೇತ್ರ ಎಂಬ ಪೌರಾಣಿಕ ನಾಟಕಪ್ರದರ್ಶನಗೊಂಡಿತು.ಅಮ್ಮನವರ ಅಪ್ಪಣೆ ಮೇರೆಗೆ ರಥೋತ್ಸವದ ಮುಕ್ತಿ ಹಾಗೂ ರಥೋತ್ಸವದ ಹೂವಿನ ಹಾರಗಳನ್ನು ಹರಾಜು ಹಾಕಲಾಯಿತು.



# ಕೋಟಿ ಕುಬೇರರು, ಖಾಲಿ ಕೈ ಕುಚೇಲರು

ಬಸವಣ್ಣ ಹುಟ್ಟಿ 890 ವರ್ಷಗಳ ನಂತರ ಆಚರಿಸಬೇಕಾಗಿರುವುದು ಹುಟ್ಟು ಹಬ್ಬವಲ್ಲ ವಾಸ್ತವದಲ್ಲಿ ಬಸವ ತತ್ವಗಳ ಸಮಾಧಿಯ ವಿಷಾಧನೀಯ ಮೂಕ ರೋಧನಾ ಆಚರಣೆ ಎನಿಸುತ್ತದೆ.....

ಅನುಭವದ ಅನುಭಾವ ಸಾಹಿತ್ಯವೊಂದು ಸಮುದಾಯದ ಸಂಸ್ಕೃತಿಯಾಗಿ ಪರಿವರ್ತನೆ ಹೊಂದಿ ಸುಮಾರು 800 ವರ್ಷಗಳ ನಂತರವೂ ಜೀವಂತವಾಗಿದ್ದು ಈಗಲೂ ಅಲ್ಪ ಸ್ವಲ್ಪ ಕ್ರಿಯಾಶೀಲವಾಗಿರುವುದಕ್ಕೆ ಸಾಕ್ಷಿಯಾಗಿದೆ ಈ ನೆಲ ಅದೇ ವಚನ ಸಾಹಿತ್ಯ...

" ಈಸಕ್ಕಿಯಾಸೆ ನಿನಗೇಕೆ ? ಈಶ್ವರನೊಪ್ಪ.
ಮಾರಯ್ಯಪ್ರಿಯ ಅಮರೇಶ್ವರಲಿಂಗಕ್ಕೆ
ದೂರ ಮಾರಯ್ಯ " ಎಂಬ ಆಯ್ದಕ್ಕಿ ಮಲ್ಲವ್ವ........

" ಶಬ್ದವೆಂಬೆನೆ ಶ್ರೋತ್ರದೆಂಜಲು
ಸ್ಪರ್ಶವೆಂಬೆನೆ ತ್ವಕ್ಕಿನೆಂಜಲು
ರೂಪೆಂಬೆನೆ ನೇತ್ರದೆಂಜಲು. ರುಚಿಯೆಂಬೆನೆ ಜಿಹ್ವೆಯೆಂಜಲು
ಪರಿಮಳವೆಂಬೆನೆ ಘ್ರಾಣದೆಂಜಲು
ನಾನೆಂಬೆನೆ ಅರಿವಿನೆಂಜಲು
ಎಂಜಲೆಂಬಾ ಭಿನ್ನವಳಿದಾ
ಬೆಳಗಿನೊಳಗಣ ಬೆಳಗು
ಗುಹೇಶ್ವರ ಲಿಂಗವು..... "
ಮತ್ತು
" ಸತ್ಯವು ಇಲ್ಲ, ಅಸತ್ಯವು ಇಲ್ಲ
ಸಹಜವು ಇಲ್ಲ, ಅಸಹಜವು ಇಲ್ಲ,
ನಾನು ಇಲ್ಲ, ಇಲ್ಲ,
ಇಲ್ಲ ಇಲ್ಲ ಎಂಬುದು ತಾನಿಲ್ಲ,
ಗುಹೇಶ್ವರನೆಂಬುದು ತಾ ಬಯಲು...."
ಅಲ್ಲಮಪ್ರಭು.......

ಇಂತಹ ನಾಡಿನಲ್ಲಿ ಒಂದಷ್ಟು ಚುನಾವಣಾ ಕ್ಷೇತ್ರಗಳ ಅಭ್ಯರ್ಥಿಗಳು ಘೋಷಿಸಿರುವ ಸಾವಿರಾರು ಕೋಟಿ ಆಸ್ತಿಯ ವಿವರಗಳು ಇವರು ಜನಸೇವೆ ಎಂಬ ರಾಜಕೀಯ ಕ್ಷೇತ್ರವನ್ನೇ ಅಣಕಿಸುವಂತಿದೆ. ಅವರು ರಾಜಕೀಯ ಕ್ಷೇತ್ರದಲ್ಲಿ ಇದ್ದರೂ ವರ್ಷ ವರ್ಷ ಅವರ ಹಣ ದ್ವಿಗುಣ ತ್ರಿಗುಣ ಆಗುತ್ತಲೇ ಇದೆ. ಇವರು ವ್ಯಾಪಾರ ವ್ಯವಹಾರ ಮಾಡಬಾರದು ಎಂದಲ್ಲ. ಆದರೆ ಇಷ್ಟು ದೊಡ್ಡ ಶ್ರೀಮಂತರು ಸಾರ್ವಜನಿಕ ಸೇವೆಯನ್ನು ಅತ್ಯಂತ ಬಡವರ ಬೇಡಿಕೆಗಳನ್ನು ಪೂರೈಸಲು ಸಾಧ್ಯವೇ ಎಂಬ ಪ್ರಶ್ನೆ ಮತ್ತು ಅನುಮಾನ ಕಾಡುತ್ತದೆ. ಜೊತೆಗೆ ಹಣದಿಂದ ಗೆಲ್ಲಬಹುದು ಎಂಬ ಮನಸ್ಥಿತಿ ಉಂಟಾದರೆ ಸೇವೆ ಹಿನ್ನೆಲೆಗೆ ಸರಿಯುತ್ತದೆ......

ಇಂತಹ ಸನ್ನಿವೇಶದಲ್ಲಿ ಚುನಾವಣೆ ಎಂಬ ಪ್ರಜಾಪ್ರಭುತ್ವದ ಪ್ರಕ್ರಿಯೆ ನಡೆಯುತ್ತಿದೆ. ಅಲ್ಲಿ.....

" ಮತ ಮಾರಾಟಕ್ಕಿಲ್ಲ ಎಂದು ಬಹುತೇಕ ಮಾಧ್ಯಮಗಳು ಸಾಮಾಜಿಕ ಜವಾಬ್ದಾರಿಯ ಜಾಹೀರಾತು ಪ್ರಸಾರ ಮಾಡುತ್ತಿವೆ. ತುಂಬಾ ಸಂತೋಷ. ಜೊತೆಗೆ ಮಾಧ್ಯಮಗಳು ಸಹ ಮಾರಾಟಕ್ಕಿಲ್ಲ ಎಂದು ಎಲ್ಲಾ ಪ್ರಬುದ್ಧ ಮನಸ್ಸುಗಳು ಸಹ ನಮ್ಮ ನಮ್ಮ ನೆಲೆಯಲ್ಲಿ ಪ್ರಚಾರ ಮಾಡಬಹುದಲ್ಲವೇ...."

" ಶಾಸಕರು - ಪಕ್ಷಗಳ ಕಾರ್ಯಕರ್ತರು ಮಾರಾಟಕ್ಕಿಲ್ಲ ಎಂದು ಏಕೆ ಜಾಹೀರಾತು ಪ್ರಕಟಿಸಬಾರದು....."

" ಧಾರ್ಮಿಕ ಸಂಸ್ಥೆಗಳು ಮತ್ತು ಮುಖ್ಯಸ್ಥರು ಮಾರಾಟಕ್ಕಿಲ್ಲ ಎಂದರೆ ತಪ್ಪಾಗುತ್ತದೆಯೇ...."

" ಸರ್ಕಾರಿ ಅಧಿಕಾರಿಗಳು ಸಂಬಳದ ಹೊರತು ಬೇರೆ ಹಣಕ್ಕೆ ಮಾರಾಟವಾಗುವುದಿಲ್ಲ ಎಂದು ಆತ್ಮಸಾಕ್ಷಿಯಾಗಿ ಬಹಿರಂಗ ಜಾಹೀರಾತು ಪ್ರಕಟಿಸಿಬಹುದೇ....."

" ಶಿಕ್ಷಣ ಸಂಸ್ಥೆಗಳು - ಆಸ್ಪತ್ರೆಗಳು ಮಾರಾಟಕ್ಕಲ್ಲ ಸೇವೆಗಾಗಿ ಮಾತ್ರ ಎಂದು ಹೇಳುವುದು ಹಾಸ್ಯಾಸ್ಪದವೇ......."

ಬಡಪಾಯಿ ಪ್ರಜೆಗಳು ತೆಗೆದುಕೊಳ್ಳುವ 2/3 ಸಾವಿರ ರೂಪಾಯಿಗಳ ಮೇಲೆ ಹಕ್ಕು ಚಲಾಯಿಸಿ ಅವರ ಕರ್ತವ್ಯಗಳನ್ನು ನೆನಪಿಸುವ ಜವಾಬ್ದಾರಿ ಇರುವವರಿಗೆ ಅದಕ್ಕಿಂತ ದೊಡ್ಡ ಭ್ರಷ್ಟಾಚಾರದ ಕೂಪಗಳ ಬಗ್ಗೆಯೂ ಹೆಚ್ಚು ಗಮನಹರಿಸಬಹುದಲ್ಲವೇ...

ಇದು ಪ್ರಜಾಪ್ರಭುತ್ವ ಪ್ರಜೆಗಳೇ ಪ್ರಭುಗಳು. ಆದ್ದರಿಂದ ಏನೋ ಪ್ರಭುಗಳು ಭ್ರಷ್ಟರಿಗೆ ಮತ ಹಾಕಿ ಅವರನ್ನು ಚುನಾವಣೆಯಲ್ಲಿ ಗೆಲ್ಲಿಸಿ ತಪ್ಪು ಮಾಡಿದರು ಎಂದೇ ಇಟ್ಟುಕೊಳ್ಳಿ. ಅವರು ಪ್ರಭುಗಳು ಮತ್ತು ಅಪಾರ ಸಂಖ್ಯೆಯಲ್ಲಿ ಇದ್ದಾರೆ. ಆದ್ದರಿಂದ ಅವರನ್ನು ಸ್ವಲ್ಪ ಕ್ಷಮಿಸೋಣ. ಆದರೆ ಆಯ್ಕೆಯಾಗುತ್ತಾರಲ್ಲ ಕೆಲವೇ ಶಾಸಕರು ಅವರು ಭ್ರಷ್ಟರಾದರೆ ಅವರನ್ನು ಶಿಕ್ಷಿಸಬಹುದಲ್ಲ. ಗರಿಷ್ಠ 224 ಜನರ ಭ್ರಷ್ಟಾಚಾರ ನಿಯಂತ್ರಣ ಮಾಡಲು ನಮ್ಮ ವ್ಯವಸ್ಥೆಗೆ ಸಾಧ್ಯವಾಗದಿದ್ದರೆ ಇನ್ನು 5 ಕೋಟಿ ಜನರನ್ನು ಹೇಗೆ ತಡೆಯುವುದು.

ಸುಮಾರು 10 ಕೋಟಿಯಿಂದ 50 ಕೋಟಿಯವರೆಗೆ ಬಹುತೇಕ ನಗದು ರೂಪದಲ್ಲಿ ಕಪ್ಪು ಹಣವನ್ನು ಸಾಧ್ಯವಾದಷ್ಟು ಮನೆಗಳಿಗೆ ತಲುಪಿಸುವ ಪಕ್ಷಗಳ ಕೆಲವೇ ಅಭ್ಯರ್ಥಿಗಳನ್ನು ನಿಯಂತ್ರಿಸಲಾಗದ, ಪರಿವರ್ತಿಸಲಾಗದ, ಶಿಕ್ಷಿಸಲಾಗದ ವ್ಯವಸ್ಥೆ ಕೋಟ್ಯಾಂತರ ಮತದಾರ ಕದ್ದು ಮುಚ್ಚಿ ಹಣ ಪಡೆಯುವುದನ್ನು ತಡೆಯಲು ಸಾಧ್ಯವಾಗುವುದೇ....

ಹಣ ಪಡೆದು ಮಾರಾಟವಾಗುವ ಮತದಾರ ಅಪಾಯಕಾರಿ ಏನು ಅಲ್ಲ. ಆ ಹಣದಿಂದ ಆತ ಶ್ರೀಮಂತನೇನು ಆಗುವುದಿಲ್ಲ. ಒಂದು ರೀತಿಯಲ್ಲಿ ಕೆಲವು ದಿನಗಳ ಹೊಟ್ಟೆ ಪಾಡು ಮಾತ್ರ.ಆದರೆ ಹಣ ಕೊಡುವ ಅಭ್ಯರ್ಥಿಗಳು ಗೆದ್ದರೆ 7 ಕೋಟಿ ಜನಗಳ ಪ್ರತಿನಿಧಿಗಳಾಗಿ, ಶಾಸನ ರಚಿಸಿ ಬೃಹತ್ ರಾಜ್ಯದ ಸಂಪೂರ್ಣ ಸಂಪನ್ಮೂಲಗಳ ಮೇಲೆ ಅಧಿಕಾರ ಸ್ಥಾಪಿಸಿ ಆಡಳಿತ ನಡೆಸುತ್ತಾರೆ. ಸೂಕ್ಷ್ಮವಾಗಿ ಯೋಚಿಸಿ ಇಲ್ಲಿ ಮುಖ್ಯವಾಗಿ ಪ್ರಾಮಾಣಿಕರಾಗಿರಬೇಕಾದವರು ಶಾಸಕರೋ ಮತದಾರರೋ.....

ಜೊತೆಗೆ ಮತದಾರ ಎಂಬುದು ಒಂದು ಸಮೂಹ. ಸಮೂಹ ಪ್ರಜ್ಞೆ ಸಾಮಾನ್ಯವಾಗಿ ಏಕ ಪ್ರಕಾರವಾಗಿ, ವಿವೇಚನಾಯುಕ್ತವಾಗಿ ಇರುವುದಿಲ್ಲ. ಸ್ವಲ್ಪ ಮಟ್ಟಿಗೆ ನಿರ್ಲಕ್ಷ್ಯ ಮತ್ತು ಬೇಜವಾಬ್ದಾರಿ ಹೊಂದಿರುತ್ತದೆ. ಆದರೆ ಶಾಸಕ ಎಂಬುದು ಏಕ ವ್ಯಕ್ತಿ.ಆತ ತನ್ನ ಮೇಲೆ ಸುಲಭವಾಗಿ ನಿಯಂತ್ರಣ ಸಾಧಿಸಬಹುದು.ನಿಜವಾಗಿಯೂ ಪ್ರಜಾಪ್ರಭುತ್ವ ಯಶಸ್ವಿಯಾಗಬೇಕಾದರೆ ಮತದಾರರ ಪ್ರಾಮಾಣಿಕತೆಗಿಂತ ಗೆದ್ದ ಅಭ್ಯರ್ಥಿಗಳ ಪ್ರಾಮಾಣಿಕತೆಯೇ ಬಹುಮುಖ್ಯ ಎಂಬುದು ವಾಸ್ತವ. ಅದನ್ನು ನೆನಪಿಟ್ಟುಕೊಂಡು ಆ ನಿಟ್ಟಿನಲ್ಲಿ ಹೆಚ್ಚು ಯೋಚನೆ ಮತ್ತು ಕಾರ್ಯೋನ್ಮುಖರಾಗಬೇಕುಎಂದು ಮನವಿ ಮಾಡಿಕೊಳ್ಳುತ್ತಾ........

ಎಲ್ಲರಿಗೂ ಕಾಯಕಯೋಗಿ ಬಸವಣ್ಣನವರ ಹುಟ್ಟುಹಬ್ಬದ ಶುಭಾಶಯಗಳು......

**▪ ಲೇಖನ ವಿವೇಕಾನಂದ. ಹೆಚ್.ಕೆ.**

## ಬಸವಣ್ಣನ ಜಯಂತಿ ಅರ್ಥಪೂರ್ಣವಾಗಬೇಕಾದರೆ ಅವರು ಚಿಂತನೆಗಳು ನಮಗೆ ತೋರಿಸಿದ ದಾರಿಯಲ್ಲಿ ಕ್ರಮಿಸುವ ಪ್ರಯತ್ನ ಮಾಡಬೇಕು

ಈ ಜಗತ್ತಿಗೆ ಸಮಾನತೆಯ ಸಂದೇಶ ಸಾರಿದ ತಾರತಮ್ಯಗಳನ್ನು ಮೀರಬೇಕೆಂದು ಹೇಳಿದುದನ್ನು ಕಾಯಕ ಪ್ರಧಾನವಾಗಿ ರೂಪಿಸಿಕೊಳ್ಳಬೇಕೆಂದುನಿವೇದಿಸಿಕೊಂಡ ವಿಶ್ವ ಮಾನವತಾವಾದಿ ಬಸವಣ್ಣನ ಜಯಂತಿ ಎಲ್ಲ ನೊಂದ ಜನರಿಗೆ ಆತ್ಮವಿಶ್ವಾಸ ನೀಡುವ ದಿನವಾಗಬೇಕು. ಶತಮಾನಗಳು ಉರುಳಿದರೂ ಈ ಸಮಾಜ ಅಸಮಾನತೆ ಜಾತಿ ತಾರತಮ್ಯ, ಮೇಲು ಕೀಳು, ಶ್ರೇಷ್ಟ, ಕನಿಷ್ಟ ಈ ಬಗೆಯ ನಾನಾ ರೋಗಗಳನ್ನು ತನ್ನ ಬೆನ್ನಿಗೆ ಅಂಟಿಸಿಕೊಂಡೇ ಬರುತ್ತಿದೆ. ಹಿಡಿಯಷ್ಟು ಜನ ಫಲಾನುಭವಿಗಳಾಗಲು ಬಹುಪಾಲು ಜನ ತೊಂದರೆ ಅನುಭವಿಸಬೇಕಾದ ಪರಿಪಾಠ ಇಂದಿಗೂ ನಿಂತಿಲ್ಲ, ಇರಲಿಕ್ಕೊಂದು ಸೂರು, ತೊಡಲಿಕ್ಕೊಂದು ಬಟ್ಟೆ, ದುಡಿಯಲಿಕ್ಕೊಂದು ಕಾಯಕ ಒದಗಿಸಲಾರದ ಈ ಸಮಾಜ ದ್ವೇಷಾಸೂಯೆಗಳನ್ನು ಮಾತ್ರ ಮುಂದಿನ ಶತಮಾನಗಳಿಗೂ ಹೆಚ್ಚಾಗುವಷ್ಟು ಬಿತ್ತುತ್ತಿದೆ. ಇದು ಬಹಳ ಆತಂಕದ ವಿಚಾರ. ಬಸವಣ್ಣನಂತ ಶ್ರೇಷ್ಠ ಚಿಂತಕ ಹನ್ನೆರಡನೇ ಶತಮಾನದಲ್ಲಿ ನಮ್ಮ ನಾಡಿಗೆ ಕೊಟ್ಟ ಅರಿವು ಜಾಗತಿಕ ಮಟ್ಟದಲ್ಲಿ ಯಾವ ಭೂಭಾಗದಲ್ಲಿ ಕೊಟ್ಟಿರಲಾರರು. ಶತಮಾನಗಳ ಹಿಂದಿನ ಅವರ ನೀಡಿದ ಅರಿವಿನ ವಚನಗಳ ಸಾರ ಇಂದಿಗೂ ಪ್ರಸ್ತುತವಾಗಿದೆ. ಅವರು ನಿಜವಾದ ಅರ್ಥದಲ್ಲಿ ಸಮಾಜೋ - ಧಾರ್ಮಿಕ ಸುಧಾರಕರು. ಅವರ ವಚನಗಳು ಉದಾತ್ತ ಚಿಂತನೆಗಳಿಂದ ಕೂಡಿವೆ. ನಮ್ಮ ಬುದ್ಧಿ, ಮನಸ್ಸುಗಳನ್ನು ಕ್ರಿಯಾಶೀಲವಾಗಿಸುವ, ಚೈತನ್ಯ ತುಂಬುವ ಒಂದು ಅದ್ಭುತ ಶಕ್ತಿ. ಅವರ ಚಿಂತನೆ ನಮಗೆ ಆದರ್ಶಗಳು, ಮೌಲ್ಯಗಳನ್ನು ಅಳವಡಿಸಿಕೊಳ್ಳಲು ಪ್ರೇರಣೆ ನೀಡುತ್ತದೆ. ಬಸವಣ್ಣನ ಜಯಂತಿ ಅರ್ಥಪೂರ್ಣವಾಗಬೇಕಾದರೆ ಅವರು ಚಿಂತನೆಗಳು ನಮಗೆ ತೋರಿಸಿದ ದಾರಿಯಲ್ಲಿ ಕ್ರಮಿಸುವ ಪ್ರಯತ್ನ ಮಾಡಬೇಕು. ಒಂದೊಂದು ಸಾಮಾಜಿಕ ಅನಿಷ್ಟ ತೊಡೆದು ಹಾಕುವ ಪ್ರಯತ್ನ ಮಾಡಬೇಕು. ಜತೆಗಿರುವವರು ಅದೇ ಪ್ರಕಾರ ಅನುಸರಿಸುವಂತೆ ನಾವು ಒತ್ತಾಸೆಯಾಗಿ ನಿಲ್ಲಬೇಕು.

**▪ ಜಗದ್ಗುರು**
**ಶ್ರೀ ಇಮ್ಮಡಿ ಸಿದ್ಧರಾಮೇಶ್ವರ**

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T